ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

**ಒಟ್ಟು ಪ್ರಶ್ನೆಗಳು – ೭೦**

**ಪಟ್ಟಿ – ೧೬**

# ಕರ್ನಾಟಕ ವಿಧಾನ ಪರಿಷತ್ತು

ನೂರ ಇಪ್ಪತ್ತೊಂಬತ್ತನೇ ಅಧಿವೇಶನ

**ಸೋಮವಾರ, ದಿನಾಂಕ : ೨೦ನೇ ಜುಲೈ, ೨೦೧೫**

---

## ಸಮೂಹ – I

೧. ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು

೨. ಸಾರಿಗೆ ಸಚಿವರು

೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

೪. ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

೫. ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು

೬. ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು

---

## ಬೆಳಗಾವಿ ಮಹಾನಗರದಲ್ಲಿ ಬಸ್ ನಿಲ್ದಾಣ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೪೭೧ (೧೪೦೦) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಎರಡನೆಯ ರಾಜಧಾನಿಯೆಂದು ಕರೆಯಿಸಿಕೊಳ್ಳುವ ಬೆಳಗಾವಿ ಮಹಾನಗರದ ಬಸ್ ನಿಲ್ದಾಣವು ಅವ್ಯವಸ್ಥೆಯಿಂದ ಕೂಡಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಬೆಳಗಾವಿ ಬಸ್ ನಿಲ್ದಾಣವನ್ನು ಹೈಟೆಕ್ ಬಸ್ ನಿಲ್ದಾಣವನ್ನಾಗಿ ನಿರ್ಮಿಸುವ ಬಗ್ಗೆ ಸರ್ಕಾರವು ಯೋಚಿಸಿದೆಯೇ ;

(ಇ) ಹಾಗಿದ್ದಲ್ಲಿ, ಅದಕ್ಕೆ ತಗಲುವ ಅಂದಾಜು ಮೊತ್ತವೆಷ್ಟು ; ಈ ಕುರಿತು ಕ್ರಿಯಾ ಯೋಜನೆ ತಯಾರಿಸಲಾಗಿದೆಯೇ ;

(ಈ) ಬಸ್ ನಿಲ್ದಾಣದ ಆವರಣ ಹದಗೆಟ್ಟು ತಗ್ಗು ಗುಂಡಿಗಳಿಂದ ಮಳೆಗಾಲದಲ್ಲಿ ಪ್ರಯಾಣಿಕರಿಗೆ, ವಿದ್ಯಾರ್ಥಿಗಳಿಗೆ ಹಾಗೂ ಬಸ್ ಚಾಲಕರಿಗೆ ತೊಂದರೆ ಆಗುತ್ತಿದ್ದು ಅದಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಉ) ಹೈಟೆಕ್ ಬಸ್ ನಿಲ್ದಾಣವನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು ?

## ಉತ್ತರ ಕರ್ನಾಟಕ ಭಾಗದಲ್ಲಿ ಮಾಹಿತಿ ತಂತ್ರಜ್ಞಾನ ಉದ್ಯಮ ಸ್ಥಾಪಿಸುವುದು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೪೭೨ (೧೪೦೧) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯವು ಮಾಹಿತಿ ಮತ್ತು ತಂತ್ರಜ್ಞಾನ ಉದ್ಯಮದಲ್ಲಿ ಮುಂಚೂಣಿಯಲ್ಲಿದ್ದು ಪ್ರಾದೇಶಿಕ ಅಸಮತೋಲನ ನೀಗಿಸಲು ಉತ್ತರ ಕರ್ನಾಟಕದ ಭಾಗಗಳಲ್ಲಿ ಮಾಹಿತಿ ತಂತ್ರಜ್ಞಾನ ಉದ್ಯಮಗಳನ್ನು ಸ್ಥಾಪಿಸಲು ಸರ್ಕಾರವು ಏನು ಕ್ರಮ ಕೈಗೊಂಡಿದೆ ;

(ಆ) ಉತ್ತರ ಕರ್ನಾಟಕದ ಪ್ರಮುಖ ನಗರಗಳಾದ ಹುಬ್ಬಳ್ಳಿ, ಬೆಳಗಾವಿ, ವಿಜಯಪುರ ಬಾಗಲಕೋಟೆ ಜಿಲ್ಲೆಗಳಲ್ಲಿ ಮಾಹಿತಿ ತಂತ್ರಜ್ಞಾನ ಉದ್ದಿಮೆಗಳನ್ನು ಸ್ಥಾಪಿಸಲು ಕ್ರಮ ಜರುಗಿಸಲಾಗುವುದೇ ;

(ಇ) ಬೆಳಗಾವಿ ನಗರದಲ್ಲಿ ಮಾಹಿತಿ ತಂತ್ರಜ್ಞಾನ ಉದ್ದಿಮೆ ಸ್ಥಾಪಿಸಲು ಕಳೆದ ೫-೧೦ ವರ್ಷಗಳ ಹಿಂದೆಯೇ ಜಾಗ ಗುರ್ತಿಸಲ್ಪಟ್ಟಿದ್ದರೂ ಕೂಡಾ ಮಾಹಿತಿ ತಂತ್ರಜ್ಞಾನ ಪಾರ್ಕ್ ನಿರ್ಮಿಸದೆ ಇರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಮಾಹಿತಿ ತಂತ್ರಜ್ಞಾನ ಉದ್ಯಮಗಳನ್ನು ಯಾವ ಕಾಲಮಿತಿಯಲ್ಲಿ ಸ್ಥಾಪಿಸಲಾಗುವುದು ?

## ಅರಸೀಕೆರೆ ಬಸ್ ನಿಲ್ದಾಣದ ಶೌಚಾಲಯ ಕಾಮಗಾರಿ ವಿಳಂಬ ಕುರಿತು

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೪೭೩ (೧೪೦೨) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅರಸೀಕೆರೆ ನಗರದ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್ ನಿಲ್ದಾಣದ ಶೌಚಾಲಯ ಕಾಮಗಾರಿ ವಿಳಂಬವಾಗಲು ಕಾರಣವೇನು; ಈ ಕಾಮಗಾರಿಯ ಅಂದಾಜು ವೆಚ್ಚವೆಷ್ಟು; ಬಿಡುಗಡೆ ಮಾಡಿರುವ ಹಣವೆಷ್ಟು ;

(ಆ) ಸದರಿ ಶೌಚಾಲಯದ ಕಟ್ಟಡ ಶಿಥಿಲಗೊಂಡಿದ್ದು, ಕುಸಿದು ಬೀಳುವ ಸಂಭವವಿದ್ದು, ಶೌಚಾಲಯದ ದುರ್ವಾಸನೆಯಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, ಇದನ್ನು ಪರಿಹರಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ;

(ಇ) ಅರಸೀಕೆರೆ ಬಸ್ ನಿಲ್ದಾಣ ಸಾರ್ವಜನಿಕರಿಗೆ ಅನುಕೂಲಕರವಾಗಿರುವುದರಿಂದ ಇದನ್ನು ಸ್ಥಳಾಂತರಿಸದೆ ಪಕ್ಕದ ಪಶು ಆಸ್ಪತ್ರೆಯನ್ನು ಸೇರಿಸಿಕೊಂಡು ವಿಸ್ತರಿಸಲು ಕೈಗೊಂಡಿರುವ ಕ್ರಮಗಳೇನು ?

## ಕೇರಳಾಪುರ ಬಸ್ ನಿಲ್ದಾಣ ಕೆಸರುಗುಂಡಿಯಾಗಿರುವ ಕುರಿತು

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೪೭೪ (೧೪೦೩) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅರಕಲಗೂಡು ತಾಲ್ಲೂಕಿನ ಕೇರಳಾಪುರದ ಅರಳಿಕಟ್ಟೆಯ ಬಳಿಯ ಬಸ್ ನಿಲ್ದಾಣ ಕೆಸರಿನಿಂದ ಕೂಡಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಬಸ್ ನಿಲ್ದಾಣದ ಕಾಮಗಾರಿಯನ್ನು ಪೂರ್ಣಗೊಳಿಸಲು ಸರ್ಕಾರ ಬಿಡುಗಡೆ ಮಾಡಿರುವ ಹಣವೆಷ್ಟು ;

(ಇ) ಈ ಕಾಮಗಾರಿಯನ್ನು ಪೂರ್ಣಗೊಳಿಸಲು ಕೈಗೊಂಡಿರುವ ಕ್ರಮಗಳೇನು ?

## ಸಿಂಧುತ್ವ ಪ್ರಮಾಣ ಪತ್ರ ನೀಡುವಲ್ಲಿ ವಿಳಂಬ

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೪೭೫ (೧೪೧೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೦ನೇ ಸಾಲಿನಂದ ೨೦೧೫ನೇ ಸಾಲಿನವರೆಗೆ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ "ಜಾತಿ ಸಿಂಧುತ್ವ ಪ್ರಮಾಣ" ಪತ್ರ ನೀಡುವಲ್ಲಿ ವಿಳಂಬ ಮಾಡುತ್ತಿರುವುದು ನಿಜವೆ ;

(ಆ) ಹಾಗಿದ್ದಲ್ಲಿ, ಇಲ್ಲಿಯವರೆಗೆ ಎಷ್ಟು ಸಿಂಧುತ್ವ ಪ್ರಮಾಣ ಪತ್ರಗಳನ್ನು ನೀಡಲಾಗಿದೆ ; (ಅವುಗಳ ಸಂಪೂರ್ಣ ವಿವರ ನೀಡುವುದು)

(ಇ) ಹಾಗೆಯೆ ಜಾತಿ ಸಿಂಧುತ್ವ ಪ್ರಮಾಣ ಪತ್ರ ವಿತರಿಸದೇ (Pending) ಇರುವ ಪ್ರಮಾಣ ಪತ್ರಗಳಿಗೆ ಕಾರಣಗಳೇನು ; (ಅವುಗಳ ವಿವರ ಒದಗಿಸುವುದು)

(ಈ) ಈ ಸಿಂಧುತ್ವ ಪ್ರಮಾಣ ಪತ್ರಗಳನ್ನು ನೀಡುವಲ್ಲಿ ವಿಳಂಬಕ್ಕೆ ಅಧಿಕಾರಿಗಳೇ ನೇರ ಕಾರಣರಾಗಿದ್ದು, ಈ ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ?

## ವಾಲ್ಮೀಕಿ ಅಭಿವೃದ್ಧಿಯ ಯೋಜನೆಗಳು

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೪೭೬ (೧೪೧೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಾಲ್ಮೀಕಿ ಅಭಿವೃದ್ಧಿ ನಿಗಮದಿಂದ ಪರಿಶಿಷ್ಟ ಪಂಗಡದ ಸಮುದಾಯಕ್ಕೆ ನೀಡಲಾಗುತ್ತಿರುವ ಯೋಜನೆಗಳು ಯಾವುವು ;

(ಆ) ಈ ಸಮುದಾಯದ ಬೇಡಿಕೆಯಾಗಿರುವ ಮೈಕ್ರೋ ಫೈನಾನ್ಸ್ (ನೇರ ಸಾಲ) ನೀಡುವ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು ;

(ಇ) ಈ ಅಭಿವೃದ್ಧಿ ನಿಗಮದಿಂದ ಯಾವ ಯಾವ ಸೌಲಭ್ಯಗಳನ್ನು ನೀಡಲಾಗುವುದು ; ಅದರ ವಿವರ ನೀಡುವುದು ಮತ್ತು ಸಹಾಯದನದ ಮೊತ್ತ ಎಷ್ಟು ; (ಯೋಜನೆಗಳವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ೨೦೧೩ ರಿಂದ ೨೦೧೫-೧೬ ನೇ ಸಾಲಿನವರೆಗೆ ನಿಗಮದಿಂದ ಎಷ್ಟು ಜನ ಫಲಾನುಭವಿಗಳು ಸೌಲಭ್ಯಗಳನ್ನು ಪಡೆದಿರುತ್ತಾರೆ ? (ಯೋಜನೆಗಳವಾರು, ಜಿಲ್ಲಾ ತಾಲ್ಲೂಕುಗಳವಾರು ಸಂಪೂರ್ಣ ಮಾಹಿತಿ ನೀಡುವುದು)

## ವಿದ್ಯಾರ್ಥಿಗಳಿಗೆ ನೀಡುತ್ತಿರುವ ಶಿಷ್ಯ ವೇತನ

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೪೭೭ (೧೪೮೯) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ನೀಡುತ್ತಿರುವ ಸ್ಕಾಲರ್‌ಶಿಪ್ ಎಷ್ಟು ;

(ಆ) ಹೈದರಾಬಾದ್ ಕರ್ನಾಟಕ ವ್ಯಾಪ್ತಿಯ ಪ್ರದೇಶಗಳಲ್ಲಿ ಸ್ಕಾಲರ್‌ಶಿಪ್ ಪಡೆಯುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ಒದಗಿಸುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ಸರ್ಕಾರ ನೀಡಿರುವ ಅನುದಾನವೆಷ್ಟು; (ಮಾಹಿತಿ ನೀಡುವುದು)

(ಈ) ವಿದ್ಯಾಸಿರಿ ಫಲಾನುಭವಿಗಳ ಸಂಖ್ಯೆ ಎಷ್ಟು ;

(ಉ) ವಿದ್ಯಾಸಿರಿ ಯೋಜನೆ ಅಡಿಯಲ್ಲಿ ಎಷ್ಟು ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಿದ್ದಾರೆ ? (ತಾಲ್ಲೂಕುವಾರು ವಿವರ ನೀಡುವುದು)

## ಔಷಧಿ/ದಾಸ್ತಾನುಗಳ ಕೊರತೆ

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೪೭೮ (೧೪೦೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರಿ ಆಯುರ್ವೇದ ಮಹಾವಿದ್ಯಾಲಯದಲ್ಲಿ ಔಷಧಿ / ದಾಸ್ತಾನು ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರವು ಔಷಧಿ / ದಾಸ್ತಾನುಗಳ ಕೊರತೆ ನೀಗಿಸುವ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳಲಿದೆಯೇ ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಈ ಮಹಾವಿದ್ಯಾಲಯದಲ್ಲಿ ಔಷಧಿಗಳ ಕೊರತೆಯಿಂದ ಹೊರರೋಗಿಗಳು ಪರದಾಡುತ್ತಿರುವುದು ನಿಜವೇ; ಹಾಗಿದ್ದಲ್ಲಿ ಈ ಆಸ್ಪತ್ರೆಯಲ್ಲಿ ಯಾವ ಯಾವ ಔಷಧಿಗಳು ರೋಗಿಗಳಿಗೆ ದೊರೆಯುತ್ತಿವೆ ; (ಅವುಗಳ ವಿವರ ನೀಡುವುದು)

(ಈ) ಸರ್ಕಾರವು ಔಷಧಿಗಳ ಕೊರತೆ ಆಗದಂತೆ ಯಾವ ಕ್ರಮ ಕೈಗೊಳ್ಳುವುದು? (ಮಾಹಿತಿ ನೀಡುವುದು)

## ವಸತಿ ನಿಲಯಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಡುಗೆ ಸಿಬ್ಬಂದಿಗೆ ತರಬೇತಿ ನೀಡುವುದು

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :-**

೧೪೭೯ (೧೮೭೪) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಮಾಜ ಕಲ್ಯಾಣ ವಸತಿ ನಿಲಯಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಡುಗೆ ಸಿಬ್ಬಂದಿ ಸಹಾಯಕರಿಗೆ ಮತ್ತು ಇತರರಿಗೆ ಅವರವರ ಹುದ್ದೆಗಳಿಗೆ ಅನುಗುಣವಾಗಿ ತರಬೇತಿ ನೀಡಲಾಗಿದೆಯೇ ;

(ಆ) ಅವರವರ ಹುದ್ದೆಗಳಿಗನುಗುಣವಾಗಿ ಸಮವಸ್ತ್ರ ಹಾಗೂ ಕೆಲಸಕ್ಕೆ ಅಗತ್ಯವಿರುವ ಸಲಕರಣೆಗಳನ್ನು ಒದಗಿಸಲಾಗಿದೆಯೇ ;

(ಇ) ಅವರುಗಳಿಗೆ ಸುಚಿತ್ವ, ಆರೋಗ್ಯ ಹಾಗೂ ವಸತಿ ನಿಲಯಗಳಿಗೆ ಸಂಬಂಧಪಟ್ಟ ಇತರ ಜವಾಬ್ದಾರಿಗಳ ಕುರಿತಾಗಿ ಜಾಗೃತಿ ಉಂಟುಮಾಡಲಾಗಿದೆಯೇ ;

(ಈ) ಮಹಿಳಾ ವಸತಿ ನಿಲಯಗಳಲ್ಲಿ ಕೇವಲ ಮಹಿಳೆಯರನ್ನೇ ಸಿಬ್ಬಂದಿಯನ್ನಾಗಿ ನೇಮಿಸಲಾಗುತ್ತಿದೆಯೇ ; ಈ ಕುರಿತಾಗಿ ಸರ್ಕಾರದ ನಿಲುವೇನು ?

## ರಾಜ್ಯ ಸರ್ಕಾರಿ ಸ್ವಾಮ್ಯದಲ್ಲಿರುವ ಸಾರಿಗೆ ಸಂಸ್ಥೆಗಳ ಕುರಿತು

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :-**

೧೪೮೦ (೧೮೭೩) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ಸರ್ಕಾರಿ ಸ್ವಾಮ್ಯದಲ್ಲಿರುವ ಒಟ್ಟು ಸಾರಿಗೆ ಸಂಸ್ಥೆಗಳೆಷ್ಟು ;

(ಆ) ಪ್ರತಿ ಸಾರಿಗೆ ಸಂಸ್ಥೆಗಳಲ್ಲಿರುವ ವಾಹನಗಳ ಸಂಖ್ಯೆ ಎಷ್ಟು ; ಈ ವಾಹನಗಳಿಗೆ ಪ್ರತಿ ಸಂಸ್ಥೆಯಲ್ಲಿ ಪ್ರತಿ ವರ್ಷ ಇಂಧನಕ್ಕಾಗಿ ಎಷ್ಟು ಹಣ ಖರ್ಚು ಮಾಡಲಾಗುತ್ತದೆ ; (ಕಳೆದ ಮೂರು ವರ್ಷದ ವಿವರ ನೀಡುವುದು)

(ಇ) ಈ ವಾಹನಗಳು ಲೀಟರ್ ಒಂದಕ್ಕೆ ಎಷ್ಟು ಅಂತರವನ್ನು ಕ್ರಮಿಸುತ್ತಿದೆ ; (Milege Per K.M)

(ಈ) ಈ ವಾಹನಗಳಿಗೆ ಬಳಸುವ ಇಂಧನದ ಬಳಕೆಗೆ (ಸರಾಸರಿ ಕಿ.ಮೀಟರಿಗೆ) ಇರುವ ಮಾನದಂಡಗಳೇನು ?

## ವಿದ್ಯಾರ್ಥಿ ನಿಲಯಗಳಿಗೆ ಸರಬರಾಜು ಮಾಡಲಾಗುವ ಆಹಾರ ಪೂರೈಕೆ ಟೆಂಡರ್ ಪ್ರಕ್ರಿಯೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :-**

೧೪೮೧ (೧೮೭೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ರಾಜ್ಯದಲ್ಲಿ ನಡೆಸಲಾಗುತ್ತಿರುವ ವಿವಿಧ ಸಂಸ್ಥೆಗಳಿಗೆ ಆಹಾರ ಪೂರೈಕೆಗೆ ಟೆಂಡರ್ ಪ್ರಕ್ರಿಯೆಯು ಪ್ರತಿ ವರ್ಷ ವಿಳಂಬವಾಗುತ್ತಿದ್ದು, ವಿದ್ಯಾರ್ಥಿನಿಲಯಗಳಿಗೆ ಅವಶ್ಯಕ ಆಹಾರ ಪೂರೈಕೆಯಲ್ಲಿ ವಿಳಂಬವಾಗುತ್ತಿರುವುದರಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ;

(ಆ) ಆಹಾರ ಪೂರೈಕೆಗೆ ಇರುವ ಮಾನದಂಡಗಳೇನು ;

(ಇ) ಯಾವ ಯಾವ ಹಂತಗಳಲ್ಲಿ ಯಾವ ತಿಂಗಳಿನಲ್ಲಿ ಟೆಂಡರ್ ಪ್ರಕ್ರಿಯೆಗಳನ್ನು ನಡೆಸಲಾಗುತ್ತಿದೆ ;

(ಈ) ಈ ವರ್ಷದಲ್ಲಿ ನಡೆಸಲಾಗಿರುವ ಟೆಂಡರ್ ಪ್ರಕ್ರಿಯೆಯ ವಿವರವನ್ನು ಜಿಲ್ಲಾವಾರು ನೀಡುವುದು ?

## ಅಡುಗೆ ಅನಿಲ ಸಂಪರ್ಕ ಹೊಂದಿದವರಿಗೂ ಸಹ ಸಬ್ಸಿಡಿ ದರದಲ್ಲಿ ಸೀಮೆ ಎಣ್ಣೆ ವಿತರಣೆ ಆಗುತ್ತಿರುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :-**

೧೪೮೨ (೧೮೭೫) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು

ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರಿನ ಸುತ್ತ ಮುತ್ತ ಇರುವ ತಾಲ್ಲೂಕುಗಳಲ್ಲಿ ಅಡುಗೆ ಅನಿಲ ಸಂಪರ್ಕ ಹೊಂದಿದವರಿಗೆ ಸೀಮೆ ಎಣ್ಣೆ ವಿತರಣೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕೇಂದ್ರ ಸರ್ಕಾರದಿಂದ ಅಡುಗೆ ಅನಿಲದ ಮೇಲೆ ಸಬ್ಸಿಡಿಯನ್ನು ನೀಡುತ್ತಿದ್ದು, ಸೀಮೆ ಎಣ್ಣೆಗೂ ಕೂಡ ಸಬ್ಸಿಡಿ ಪಡೆದು ಕೆಲವೊಂದು ಕಾರ್ಡುದಾರರು ಸರ್ಕಾರದ ಹಣ ದುರುಪಯೋಗ ಮಾಡಿಕೊಳ್ಳುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ ;

(ಇ) ಈ ಹಣದ ದುರುಪಯೋಗವನ್ನು ತಡೆಯಲು ಸರ್ಕಾರ ಯಾವ ಕ್ರಮಕೈಗೊಂಡಿದೆ ?

## ರಾಜ್ಯದಲ್ಲಿ ಬಿ.ಪಿ.ಎಲ್. ಕಾರ್ಡ್‌ನಂತೆ ಎ.ಪಿ.ಎಲ್. ಕಾರ್ಡ್‌ಗೂ ಜಾರಿಗೊಳಿಸಿದ ಅನ್ನಭಾಗ್ಯ ಯೋಜನೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :-**

೧೪೮೩ (೧೮೭೬) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಬಿ.ಪಿ.ಎಲ್ ಕಾರ್ಡ್‌ನಂತೆ ಎ.ಪಿ.ಎಲ್ ಕಾರ್ಡ್‌ಗೂ ಜಾರಿಗೊಳಿಸಿದ ಅನ್ನಭಾಗ್ಯ ಯೋಜನೆಯಡಿ ಎಷ್ಟು ಜನ ಫಲಾನುಭವಿಗಳು ನೊಂದಾಣಿ ಮಾಡಿದ್ದಾರೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಬಿ.ಪಿ.ಎಲ್ ಕಾರ್ಡ್ ನಂತೆ ಎ.ಪಿ.ಎಲ್ ಕಾರ್ಡ್‌ಗೂ ಅಕ್ಕಿ ಅಲ್ಲದೆ ಇತರೆ ಆಹಾರ ಸಾಮಾಗ್ರಿಗಳನ್ನು ವಿತರಿಸಲಾಗುತ್ತಿದೆಯೇ ;

(ಇ) ಕಳೆದ ೨ ತಿಂಗಳಿಂದ ಎ.ಪಿ.ಎಲ್ ಕಾರ್ಡ್‌ದಾರರಿಗೆ ಹಂಚಿಕೆಯಾದ ಆಹಾರ ಧಾನ್ಯದ ಪ್ರಮಾಣವೆಷ್ಟು ;

(ಈ) ರಾಜ್ಯದ ಉತ್ತರ ಕರ್ನಾಟಕದ ಭಾಗಕ್ಕೆ ಬೇಡಿಕೆಯಿರುವ ಆಹಾರ ಧಾನ್ಯಗಳು ಹಾಗೂ ದಕ್ಷಿಣ ಭಾಗದ ಕಾರ್ಡ್‌ದಾರರಿಗೆ ಬೇಕಾಗಿರುವ ಆಹಾರ ಧಾನ್ಯಗಳ ಬೇಡಿಕೆ ಬೇರೆಯಾಗಿರುವುದರಿಂದ ಅವಶ್ಯಕತೆಗೆ ಅನುಗುಣವಾಗಿ ಆಹಾರ ಪೂರೈಸಲು ಯೋಚಿಸಲಾಗಿದೆಯೇ ?

## ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿನ ಮೊರಾರ್ಜಿ, ಕಿತ್ತೂರು ಶಾಲಾ ಶಿಕ್ಷಕರ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :-**

೧೪೮೪ (೧೮೮೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮೊರಾರ್ಜಿ ಹಾಗೂ ಕಿತ್ತೂರು ಚೆನ್ನಮ್ಮ ಶಾಲೆಗಳು ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಎಲ್ಲೆಲ್ಲಿವೇ ; (ವಿವರ ನೀಡುವುದು)

(ಆ) ಇಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರ ಹೆಸರು, ವಿಷಯ ಮತ್ತು ಪ್ರತಿಯೊಬ್ಬರ ಶಾಲಾವಾರು ವಿವರ ನೀಡುವುದು ;

(ಇ) ಇಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ;

(ಈ) ಪ್ರತಿ ಶಾಲೆಯ ಎಸ್.ಎಸ್.ಎಲ್.ಸಿ ಫಲಿತಾಂಶದ ವಿಶ್ಲೇಷನಾತ್ಮಕ ವಿವರ ನೀಡುವುದು ? (ವಿಷಯವಾರು ವಿವರ ನೀಡುವುದು)

## ಮೊರಾರ್ಜಿ ಹಾಗೂ ಕಿತ್ತೂರು ಚೆನ್ನಮ್ಮ ಶಾಲೆಗಳಿಗೆ ಒದಗಿಸಿರುವ ಸೌಕರ್ಯಗಳ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :-**

೧೪೮೫ (೧೮೭೯) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿರುವ ಮೊರಾರ್ಜಿ, ಕಿತ್ತೂರು ಚೆನ್ನಮ್ಮ ಶಾಲೆಗಳಿಗೆ ಒದಗಿಸಿರುವ ಕಟ್ಟಡ, ಮೂಲಭೂತ ಸೌಕರ್ಯ, ಸಿಬ್ಬಂದಿ ಹಾಗೂ ಸಿ.ಸಿ. ಕ್ಯಾಮರಾ ಅಳವಡಿಕೆ ಕುರಿತು ಪ್ರತಿ ಶಾಲಾವಾರು ವಿವರ ನೀಡುವುದು ;

(ಆ) ಕಳೆದ ೦೨ ವರ್ಷಗಳಿಂದ ಪ್ರತಿ ಶಾಲೆಗೆ ನೀಡಿರುವ ನಿರ್ವಹಣಾ ಅನುದಾನ ಅಭಿವೃದ್ಧಿ ಅನುದಾನ ಕೈಗೊಂಡಿರುವ ದುರಸ್ತಿ ಕಾರ್ಯಗಳು ಎಷ್ಟು; ಮತ್ತು ಯಾವುವು ; (ಪ್ರತಿ ಶಾಲಾವಾರು ವಿವರ ನೀಡುವುದು)

(ಇ) ಕರ್ನಾಟಕ ರಾಜ್ಯ ವಸತಿ ಶಿಕ್ಷಣ ಸಂಸ್ಥೆಯ ಕೇಂದ್ರ ಕಛೇರಿಯಲ್ಲಿ ಸೂಕ್ತ ಸಿಬ್ಬಂದಿ ಇನ್ನಿತರೆ ಸೌಲಭ್ಯಗಳಿರದ ಅಲ್ಲಿಯ ಸಿಬ್ಬಂದಿಗಳು ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಈ ಶಾಲೆಗಳನ್ನು ಬೆಂಗಳೂರಿನಿಂದಲೇ ನಿರ್ವಹಣೆ ಮಾಡುತ್ತಿದ್ದು, ಜಿಲ್ಲಾ ಮಟ್ಟದಲ್ಲಿ ಅಧಿಕಾರ ವಿಕೇಂದ್ರೀಕರಣದ ಕುರಿತು ಸರ್ಕಾರ ಚಿಂತನೆ ನಡೆಸಿದೆಯೇ ?

## ಕಲಬುರಗಿಯ ಪ್ರವೀಣ ವಿದ್ಯಾ ಸಂಸ್ಥೆಯ ಹೆಸರಿನಲ್ಲಿ ನಡೆಯುತ್ತಿರುವ ಅವ್ಯವಹಾರದ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :-**

೧೪೮೬ (೧೮೮೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಮಕ್ಕಳ ಸ್ಕಾಲರ್‌ಶಿಪ್ ಹಣವನ್ನು ಕಲಬುರಗಿಯ ಪ್ರವೀಣ್ ವಿದ್ಯಾ ಸಂಸ್ಥೆಯ ಹೆಸರಿನಲ್ಲಿ ಬೋಗಸ್ ಶಾಲೆ ಸೃಷ್ಟಿಸಿ ಎತ್ತಿ ಹಾಕಿರುವ ಹಗರಣ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ತೆಗೆದುಕೊಂಡ ಕ್ರಮಗಳೇನು ; (ಹಂತವಾರು ವಿವರ ನೀಡುವುದು)

(ಇ) ಈ ಪ್ರಕರಣ ಮುಚ್ಚಿ ಹಾಕಲು ಅತ್ಯುನ್ನತ ರಾಜಕೀಯ ನಾಯಕರು ಪ್ರಯತ್ನಿಸುತ್ತಿರುವುದು ನಿಜವೇ ?

## ಹಾವೇರಿ ಜಿಲ್ಲೆಯಲ್ಲಿ ಡೆಂಗ್ಯೂ ಜ್ವರ ಕುರಿತು

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೪೮೭ (೧೮೮೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :-

ಹಾವೇರಿ ಜಿಲ್ಲೆಯಲ್ಲಿ ಎಲ್ಲೆಲ್ಲಿ ಡೆಂಗ್ಯೂ ಜ್ವರ ಕಾಣಿಸಿಕೊಂಡಿದೆ; ಎಷ್ಟು ಜನರು ಇದುವರೆವಿಗೆ ಸಾವನ್ನಪ್ಪಿದ್ದಾರೆ; ಎಷ್ಟು ಜನರು ಯಾವ ಯಾವ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ; ಇದನ್ನು ನಿಯಂತ್ರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು)

## ಪ್ಯಾರಾ ಮೆಡಿಕಲ್ ಕೋರ್ಸ್‌ಗಳ ಕುರಿತು

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೪೮೮ (೧೮೮೫) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ಯಾರಾ ಮೆಡಿಕಲ್ ಕೋರ್ಸುಗಳಲ್ಲಿ ಎಷ್ಟು ವಿಧಗಳಿವೆ ; (ಕೋರ್ಸುವಾರು ಮಾಹಿತಿ ಒದಗಿಸುವುದು)

(ಆ) ಯಾವ ಯಾವ ಕೋರ್ಸುಗಳ ಅವಧಿ ಎಷ್ಟು ವರ್ಷ; ಈಗ ಪ್ರತಿ ವರ್ಷ ಸದರಿ ಕೋರ್ಸುಗಳನ್ನು ಮುಗಿಸಿ ಎಷ್ಟು ಅಭ್ಯರ್ಥಿಗಳು ಹೊರಬರುತ್ತಿದ್ದಾರೆ; ಈಗಾಗಲೆ ಸದರಿ ಕೋರ್ಸು ಮುಗಿಸಿರುವ ಎಷ್ಟು ಅಭ್ಯರ್ಥಿಗಳಿದ್ದಾರೆ ;

(ಇ) ಸರ್ಕಾರದ ಮಟ್ಟದಲ್ಲಿ ಇವರುಗಳ ಎಷ್ಟು ಹುದ್ದೆ ಖಾಲಿ ಇವೆ; ಇವರುಗಳೆಲ್ಲರಿಗೆ ಸರ್ಕಾರ ಉದ್ಯೋಗ ಕಲ್ಪಿಸದಿದ್ದರೆ ಇವರುಗಳಿಗೆ ಖಾಸಗಿಯಾಗಿ ಬೇಡಿಕೆ ಇದೆಯೇ ; (ವಿವರ ನೀಡುವುದು)

(ಈ) ಪ್ರತಿ ವರ್ಷ ಕಾರ್ಖಾನೆಯ ರೀತಿಯಲ್ಲಿ ಪ್ಯಾರಾ ಮೆಡಿಕಲ್ ಕೋರ್ಸು ಮುಗಿಸಿಕೊಂಡು ಬರುವ ಎಲ್ಲರಿಗೂ ಮುಂದೆ ಭವಿಷ್ಯ ಇದೆಯೇ; ಈ ಬಗ್ಗೆ ಸರ್ಕಾರದ ನಿಲುವೇನು ?

## ರಾಣೆಬೆನ್ನೂರು ಸರ್ಕಾರಿ ಆಸ್ಪತ್ರೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು)** :-

೧೪೮೯ (೧೮೮೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಣೆಬೆನ್ನೂರು ಸರ್ಕಾರಿ ಆಸ್ಪತ್ರೆಯ ಅವ್ಯವಸ್ಥೆ, ಸ್ಥಳೀಯರ ದಬ್ಬಾಳಿಕೆ ಬಗ್ಗೆ ಅಲ್ಲಿಯ ವೈದ್ಯಾಧಿಕಾರಿಗಳು ಅಸಹಾಯಕ ಸಮಸ್ಯೆಗಳನ್ನು ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇಂತಹ ಎಷ್ಟು ಆಸ್ಪತ್ರೆಗಳಿಗೆ ಮಾನ್ಯ ಆರೋಗ್ಯ ಸಚಿವರು ಆಕಸ್ಮಿಕ ಭೇಟಿ ನೀಡಿರುವರು ;

(ಆ) ಈ ಆಸ್ಪತ್ರೆ ಆವರಣದಲ್ಲಿ ಜಾನುವಾರುಗಳನ್ನು ಕಟ್ಟಿರುವುದು, ಸೊಳ್ಳೆ ಉತ್ಪತ್ತಿಯ ತಾಣವಾಗಿರುವುದು ನಿಜವೇ ;

(ಇ) ಈ ಆಸ್ಪತ್ರೆಯ ಸಮಸ್ಯೆ ಬಗೆಹರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಹಾವೇರಿ ಜಿಲ್ಲೆಯಲ್ಲಿಯ ಹಾಸ್ಟೆಲ್‌ಗಳು

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೪೯೦ (೧೮೮೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾವೇರಿ ಜಿಲ್ಲೆಯಲ್ಲಿರುವ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು ; ಅದರಲ್ಲಿ ಸರ್ಕಾರಿ ಮತ್ತು ಅರೆ ಸರ್ಕಾರಿ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ಹಾಸ್ಟೆಲ್‌ಗಳು ಸರ್ಕಾರದಿಂದ ಯಾವ ವರ್ಷಗಳಲ್ಲಿ ಮಂಜೂರಾಗಿವೆ ;

(ಇ) ಸ್ವಂತ ಕಟ್ಟಡದಲ್ಲಿರುವ ಹಾಸ್ಟೆಲ್‌ಗಳೆಷ್ಟು; ಬಾಡಿಗೆ ಕಟ್ಟಡಗಳಲ್ಲಿರುವ ಹಾಸ್ಟೆಲ್‌ಗಳೆಷ್ಟು; ಎಷ್ಟು ವರ್ಷಗಳಿಂದ ಬಾಡಿಗೆ ಕಟ್ಟಡದಲ್ಲಿದೆ ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಬಿ.ಪಿ.ಎಲ್ ಹಾಗೂ ಎ.ಪಿ.ಎಲ್ ಕಾರ್ಡುದಾರರಿಗೆ ಸಿಗುವ ಸೌಲಭ್ಯಗಳು

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೧೪೯೧ (೧೮೮೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರದ ಆಸ್ಪತ್ರೆಗಳು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಬಿ.ಪಿ.ಎಲ್ ಹಾಗೂ ಎ.ಪಿ.ಎಲ್ ಕಾರ್ಡುದಾರರಿಗೆ ಯಾವ-ಯಾವ ಸೌಲಭ್ಯಗಳನ್ನು ಕೊಡಲಾಗುತ್ತಿದೆ ;

F-2 B/B

(ಆ) ಬಡ ಜನರು ಒಳರೋಗಿಗಳಾಗಿ ದಾಖಲಾದರೆ ಅವರಿಗೆ ಔಷಧಿಗಳನ್ನು ಬರೆದು ಕೊಟ್ಟು ಅವರ ಕಡೆಯಿಂದ ಹಣ ಖರ್ಚು ಮಾಡಿಸಿ ಹೊರಗಿನಿಂದ ಔಷಧಿಗಳನ್ನು ತರಿಸಿಕೊಳ್ಳುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಇದರಿಂದ ಬಡ ಜನರಿಗೆ ತೊಂದರೆಯಾಗುತ್ತಿದ್ದು, ಬಡಜನರು ಒಳರೋಗಿಗಳಾಗಿ ದಾಖಲಾದರೆ ಔಷಧಿ ಸಮೇತವಾಗಿ ಎಲ್ಲ ಸೌಕರ್ಯಗಳನ್ನು ಉಚಿತವಾಗಿ ಕೊಡಲು ಕ್ರಮ ಕೈಗೊಳ್ಳಲಾಗುವುದೇ; ಹಾಗೂ ಆಸ್ಪತ್ರೆಯಿಂದ ಡಿಸ್‌ಚಾರ್ಜ್ ಆದ ನಂತರ ಅವರಿಗೆ ಅವಶ್ಯವಿರುವ ಔಷಧಗಳನ್ನು ಕೊಡಲಾಗುವುದೇ ?

## ಬೆಳಗಾವಿ ಜಿಲ್ಲೆ ಸವದತ್ತಿ ತಾಲ್ಲೂಕಿನ ಹಿರೇಬೂದನೂರ ಗ್ರಾಮದಲ್ಲಿ ನವೋದಯ ಶಾಲೆ ಪ್ರಾರಂಭಿಸುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೧೪೯೨ (೧೮೮೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ :–

(ಅ) ಬೆಳಗಾವಿ ಜಿಲ್ಲೆ ಸವದತ್ತಿ ತಾಲ್ಲೂಕಿನ ಹಿರೇಬೂದನೂರು ಗ್ರಾಮದಲ್ಲಿ ನೂರಕ್ಕೆ ನೂರರಷ್ಟು ಪರಿಶಿಷ್ಟ ಜಾತಿ ಹಾಗೂ ಜನಾಂಗದ ಜನರು ವಾಸಿಸುತ್ತಿರುವ ಸಂಗತಿ ನಿಜವೇ ;

(ಆ) ಹಾಗಿದ್ದಲ್ಲಿ, ಅವರ ಮಕ್ಕಳ ವಿದ್ಯಾಭ್ಯಾಸದ ಅನುಕೂಲತೆಗಾಗಿ ನವೋದಯ ಶಾಲೆಯನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದೇ ;

(ಇ) ಗ್ರಾಮ ಪಂಚಾಯತಿಯವರು ಶಾಲೆ ಪ್ರಾರಂಭಿಸಲು ಎಲ್ಲ ಸೌಲಭ್ಯ ಒದಗಿಸಲು ಸಿದ್ಧರಿದ್ದು ಎಲ್ಲ ಸೌಕರ್ಯಗಳು ಇರುವುದರಿಂದ ಕೂಡಲೇ ಶಾಲೆ ಪ್ರಾರಂಭಿಸಲು ಪರಿಶೀಲಿಸಲಾಗುವುದೇ ?

## ಬೆಳಗಾವಿ ಸರ್ಕಾರಿ ಮೆಡಿಕಲ್ ಕಾಲೇಜಿನಲ್ಲಿ ಬಿ.ಪಿ.ಎಲ್ ಹಾಗೂ ಎ.ಪಿ.ಎಲ್ ಕಾರ್ಡುದಾರರಿಗೆ ಸಿಗುವ ಸೌಲಭ್ಯಗಳು

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :-**

೧೪೯೩ (೧೮೯೦) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾವಿ ಸರ್ಕಾರಿ ಮೆಡಿಕಲ್ ಕಾಲೇಜಿನಲ್ಲಿ ಎ.ಪಿ.ಎಲ್ ಕಾರ್ಡುದಾರರಿಗೆ ಯಾವ-ಯಾವ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ ; ಹಾಗೂ ಎ.ಪಿ.ಎಲ್ ಕಾರ್ಡುದಾರರಿಗೆ ಯಾವ ಸೌಲಭ್ಯಗಳನ್ನು ಒದಗಿಸಲಾಗುತ್ತದೆ ;

(ಆ) ಡಯಾಲಿಸಿಸ್ ಮಾಡಲು ಹಣ ಪಡೆಯುತ್ತಿರುವ ಸಂಗತಿ ನಿಜವೇ; ನಿಜವಾಗಿದ್ದಲ್ಲಿ, ಉಚಿತವಾಗಿ ಡಯಾಲಿಸಿಸ್ ಚಿಕಿತ್ಸೆ ನೀಡಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ಬೆಳಗಾವಿ ಜಿಲ್ಲೆ ಸವದತ್ತಿ ತಾಲ್ಲೂಕಿನ ಹೊಸೂರು ಗ್ರಾಮದಲ್ಲಿ ನವೋದಯ ಶಾಲೆ ಪ್ರಾರಂಭಿಸುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :-**

೧೪೯೪ (೧೮೮೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾವಿ ಜಿಲ್ಲೆ ಸವದತ್ತಿ ತಾಲ್ಲೂಕಿನ ಹೊಸೂರು ಗ್ರಾಮದಲ್ಲಿ ಮಲಪ್ರಭಾ ಮುಳುಗಡೆ ಪ್ರದೇಶದ ಜನರು ವಲಸೆಹೋಗಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಈ ಮುಳುಗಡೆ ಪ್ರದೇಶದ ಜನರ ಅನುಕೂಲತೆಗಾಗಿ ಇಲ್ಲಿ ನವೋದಯ ಶಾಲೆಯನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದೇ ;

(ಇ) ಇಲ್ಲಿಯ ಗ್ರಾಮ ಪಂಚಾಯತಿಯವರು ಶಾಲೆ ಪ್ರಾರಂಭಿಸಲು ಎಲ್ಲ ಸೌಲಭ್ಯ ಒದಗಿಸಲು ಸಿದ್ಧರಿದ್ದು ಎಲ್ಲ ಸೌಕರ್ಯಗಳು ಇರುವುದರಿಂದ ಸರ್ಕಾರವು ಇಲ್ಲಿ ಶಾಲೆ ಪ್ರಾರಂಭಿಸಲು ಪರಿಶೀಲಿಸುವುದೆ ?

## ಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ಶುಶ್ರೂಷಕರನ್ನು ಖಾಯಂಗೊಳಿಸುವ ಬಗ್ಗೆ

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೪೯೫ (೧೪೯೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಬರುವ ಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವ "ಶುಶ್ರೂಷಕರ" ಸಂಖ್ಯೆ ಎಷ್ಟು ;

(ಆ) ಆ ಪೈಕಿ ಎಷ್ಟು ಶೂಶ್ರೂಷಕರನ್ನು ಖಾಯಂಗೊಳಿಸಲಾಗಿದೆ ;

(ಇ) ಖಾಯಂಗೊಳಿಸದಿದ್ದಲ್ಲಿ ಕಾರಣವೇನು ? (ತಾಲ್ಲೂಕುವಾರು ಶುಶ್ರೂಷಕರ ವಿವರ ನೀಡುವುದು)

## ಬೆಳಗಾವಿ ತಾತ್ಕಾಲಿಕ ನಗರ ಸಾರಿಗೆ ಬಸ್ ನಿಲ್ದಾಣ ನಿರ್ಮಾಣ ವಿಳಂಬವಾಗಿರುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :-**

೧೪೯೬ (೧೮೯೭) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾವಿಯ ತಾತ್ಕಾಲಿಕ ನಗರ ಸಾರಿಗೆ ಬಸ್ ನಿಲ್ದಾಣದ ನಿರ್ಮಾಣ ಕಾಮಗಾರಿ ಪ್ರಾರಂಭವಾಗಿದ್ದು ಯಾವಾಗ ; ಸದರಿ ಕಾಮಗಾರಿಯನ್ನು ಪೂರ್ಣಗೊಳಿಸಲು ನಿಗಧಿಪಡಿಸಲಾಗಿದ್ದ ಕಾಲಮಿತಿ ಎಷ್ಟು ; (ವಿವರ ನೀಡುವುದು)

(ಆ) ಪ್ರಸ್ತುತ ಕಾಮಗಾರಿ ಯಾವ ಹಂತದಲ್ಲಿದೆ ; ವಿಳಂಬಕ್ಕೆ ಕಾರಣವೇನು ;

(ಇ) ಇದನ್ನು ಪೂರ್ಣಗೊಳಿಸಲು ಬೇಕಾಗುವ ಕಾಲಾವಧಿ ಎಷ್ಟು ?

## ಸರ್ಕಾರಿ ಹೆರಿಗೆ ಆಸ್ಪತ್ರೆ ನಿರ್ಮಾಣ ಮಾಡುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :-**

೧೪೯೭ (೧೮೯೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಾಲು ಮರದ ತಿಮ್ಮಕ್ಕನವರು, ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಮಾಗಡಿ ತಾಲ್ಲೂಕಿನ ಹುಲಿಕಲ್ ಗ್ರಾಮದಲ್ಲಿ ಒಂದು ಹೆರಿಗೆ

ಆಸ್ಪತ್ರೆ ಕಟ್ಟಿಸಿಕೊಡುವಂತೆ ಸರ್ಕಾರಕ್ಕೆ ಮನವಿ ಸಲ್ಲಿಸಿರುವುದು ಯಾವಾಗ ;

(ಆ) ಹೆರಿಗೆ ಆಸ್ಪತ್ರೆಯನ್ನು ನಿರ್ಮಿಸಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ?

## ಖಾಸಗಿ ಸಂಸ್ಥೆಗಳಿಗೆ ನೂತನ ರಕ್ತನಿಧಿ ಕೇಂದ್ರ ತೆರೆಯಲು ಪರವಾನಗಿ ನೀಡುವಲ್ಲಿ ವಿಳಂಬವಾಗುತ್ತಿರುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೧೪೯೮ (೧೮೯೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಿಂದ ಯಾವ ಯಾವ ಖಾಸಗಿ ಮತ್ತು ಇತರೆ ಸಂಸ್ಥೆಗಳು ರಾಜ್ಯದಲ್ಲಿ ನೂತನ ರಕ್ತ ನಿಧಿ ಕೇಂದ್ರಗಳನ್ನು ಪ್ರಾರಂಭಿಸಲು ಅರ್ಜಿ ಸಲ್ಲಿಸಿರುತ್ತಾರೆ ; (ವಿವರ ನೀಡುವುದು)

(ಆ) ಮೂರು ವರ್ಷಗಳಿಂದ ಅರ್ಜಿ ಸಲ್ಲಿಸಿದ ಯಾವ ಸಂಸ್ಥೆಗಳಿಗೆ ಪರವಾನಗಿ ನೀಡಲಾಗಿದೆಯೇ ;

(ಇ) ಅರ್ಜಿ ಸಲ್ಲಿಸಿಯೂ ಇದುವರೆವಿಗೂ ಪರವಾನಗಿ ಪಡೆಯದ ಸಂಸ್ಥೆಗಳು ಯಾವುವು ; ಪರವಾನಗಿ ನೀಡದಿರಲು ಕಾರಣಗಳೇನು ;

(ಈ) ಪರವಾನಗಿ ನೀಡಲು ಸರ್ಕಾರವು ೨ ವರ್ಷಗಳ ಕಾಲ ತೆಗೆದುಕೊಳ್ಳುವುದೆನ್ನುವ ಆರೋಪವಿರುವುದು ನಿಜವೇ ; ನಿಜವಾಗಿದ್ದಲ್ಲಿ, ವಿಳಂಬಕ್ಕೆ ಸೂಕ್ತ ಕಾರಣಗಳೇನು ? (ವಿವರ ನೀಡುವುದು)

## ಸರ್ಕಾರಿ ರಕ್ತನಿಧಿ ಕೇಂದ್ರಗಳ ಕೊರತೆ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :-**

೧೪೯ (೧೪೯೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸಿಸರಿಯನ್ ಮುಂತಾದ ಶಸ್ತ್ರ ಚಿಕಿತ್ಸೆಗಳ ಸೌಲಭ್ಯವಿರುವ ಎಲ್ಲಾ ಜಿಲ್ಲಾ, ತಾಲ್ಲೂಕು, ಸರ್ಕಾರಿ ಆಸ್ಪತ್ರೆಗಳಲ್ಲಿ ರಕ್ತ ನಿಧಿ ಸೌಲಭ್ಯವನ್ನು ಕಲ್ಪಿಸಲಾಗಿದೆಯೇ ;

(ಆ) ಇಲ್ಲವಾದಲ್ಲಿ , ಶಸ್ತ್ರ ಚಿಕಿತ್ಸೆಯ ಸೌಲಭ್ಯವಿದ್ದೂ, ರಕ್ತ ನಿಧಿ ಕೇಂದ್ರಗಳ ಕೊರತೆಯಿರುವ ಸರ್ಕಾರಿ ಆಸ್ಪತ್ರೆಗಳು ಯಾವುವು ;

(ಇ) ಕಳೆದ ೩ ವರ್ಷಗಳಿಂದ ರಾಜ್ಯದಲ್ಲಿ ಎಷ್ಟು ಸಂಖ್ಯೆ ಸರ್ಕಾರಿ ನೂತನ ರಕ್ತ ನಿಧಿ ಕೇಂದ್ರಗಳು ಪ್ರಾರಂಭವಾಗಿವೆ ; ಅವು ಯಾವುವು; (ವಿವರ ನೀಡುವುದು)

(ಈ) ನೂತನವಾಗಿ ರಕ್ತ ನಿಧಿ ಕೇಂದ್ರಗಳನ್ನು ತೆರೆಯಲು ಹೆಚ್ಚು ಒತ್ತು ನೀಡುವ ಕುರಿತು ಸರ್ಕಾರವು ಮುಂದಾಗುವುದೇ ? (ವಿವರ ನೀಡುವುದು)

## ರಾಜ್ಯ ರಸ್ತೆ ಸಾರಿಗೆ ನಿಗಮದಿಂದ ಮಹಿಳೆಯರಿಗಾಗಿ ವಿಶೇಷ ಬಸ್ಸುಗಳು

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :–**

೧೫೦೦ (೧೯೦೦) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ರಸ್ತೆ ಸಾರಿಗೆ ನಿಗಮದಿಂದ ಮಹಿಳೆಯರಿಗಾಗಿ ವಿಶೇಷ ಬಸ್ಸುಗಳನ್ನು ಓಡಿಸಲು ಇಲಾಖೆ ಮುಂದೆ ಪ್ರಸ್ತಾವನೆ ಇದೆಯೇ; ಈ ಬಗ್ಗೆ ಮಹಿಳೆಯರಿಂದ ಬೇಡಿಕೆ ಬಂದಿದೆಯೇ; ಈ ನಿಟ್ಟಿನಲ್ಲಿ ಕೈಗೊಂಡ ಕ್ರಮಗಳೇನು;

(ಆ) ಮಂಗಳೂರಿನಲ್ಲಿ ಮಹಿಳೆಯರಿಗಾಗಿ ಪ್ರತ್ಯೇಕ ಸಿಟಿ ಬಸ್ಸುಗಳನ್ನು ಓಡಿಸಲು ಇಲಾಖೆ ಕ್ರಮಕೈಗೊಳ್ಳುವುದೇ;

(ಇ) ರಾಜ್ಯ ರಸ್ತೆ ಸಾರಿಗೆ ಬಸ್ಸನಲ್ಲಿ ಮಹಿಳೆಯರಿಗಾಗಿ ಮೀಸಲಿಟ್ಟ ಸೀಟುಗಳನ್ನು ಉಲ್ಲಂಘಿಸಿದ ಬಗ್ಗೆ ಎಷ್ಟು ಪ್ರಕರಣಗಳು ದಾಖಲಾಗಿವೆ ; ಅಂತಹ ಪ್ರಕರಣಗಳಲ್ಲಿ ಕೈಗೊಂಡ ಕ್ರಮಗಳೇನು;

(ಈ) ಮಹಿಳೆಯರಿಗಾಗಿ ಎಷ್ಟು ಸೀಟುಗಳನ್ನು ವೋಲ್ವಾ ಮತ್ತು ದೂರ ಪ್ರಯಾಣ ಬಸ್ಸುಗಳಲ್ಲಿ ಮೀಸಲಿಡಲು ಕ್ರಮಕೈಗೊಳ್ಳಲಾಗುವುದು?

# ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೆ ಏರಿಸುವ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :–**

೧೫೦೧ (೧೮೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಎಷ್ಟು ಆರೋಗ್ಯ ಕೇಂದ್ರಗಳ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಇಲಾಖೆ ಮುಂದಿದೆ;

(ಆ) ದಕ್ಷಿಣ ಕನ್ನಡ ಜಿಲ್ಲೆಯ ಯಾವ ಯಾವ ಕೇಂದ್ರಗಳಲ್ಲಿ ವೈದ್ಯರು ಸೇವೆ ಸಲ್ಲಿಸುತ್ತಿದ್ದಾರೆ; (ವಿವರ ನೀಡುವುದು)

(ಇ) ಜಿಲ್ಲೆಯ ಯಾವ ಯಾವ ಆರೋಗ್ಯ ಕೇಂದ್ರಗಳಲ್ಲಿ ರಕ್ತ ಪರೀಕ್ಷೆಯ ಪ್ರಯೋಗಾಲಯ ಸೌಲಭ್ಯವನ್ನು ಒದಗಿಸಲಾಗಿದೆ; (ವಿವರ ನೀಡುವುದು)

(ಈ) ಡೆಂಗ್ಯೂ ಮತ್ತು ಮಲೇರಿಯಾ ರೋಗವನ್ನು ಪತ್ತೆ ಹಚ್ಚಲು ಜಿಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಪ್ರಯೋಗಾಲಯಗಳ ಸೌಲಭ್ಯವನ್ನು ಪ್ರಾರಂಭಿಸಲಾಗಿದೆಯೇ; ಇಲ್ಲದಿದ್ದರೆ, ಯಾವಾಗ ಪ್ರಾರಂಭಿಸಲಾಗುವುದು?

## ಹಾಸ್ಟೆಲ್ ಪ್ರವೇಶ ಬಯಸಿ ಬಂದಿರುವ ಅರ್ಜಿಗಳ ವಿವರ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :-**

೧೫೦೨ (೧೮೯೬) ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ದಕ್ಷಿಣ ಕನ್ನಡ ಜಿಲ್ಲೆಯ ಮೆಟ್ರಿಕ್ ಪೂರ್ವ ಮತ್ತು ನಂತರ ಹಾಸ್ಟೆಲ್ ವ್ಯವಸ್ಥೆ ಪಡೆಯುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಯಾವ ಯಾವ ತರಗತಿವರೆಗೆ ಹಾಸ್ಟೆಲ್ ವ್ಯವಸ್ಥೆ ನೀಡಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಹಾಸ್ಟೆಲ್ ಪ್ರವೇಶ ಬಯಸಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು; ಪ್ರತಿಯೊಬ್ಬ ವಿದ್ಯಾರ್ಥಿಗೆ ಭರಿಸಲಾಗುತ್ತಿರುವ ವೆಚ್ಚ ಎಷ್ಟು;

(ಇ) ಮೊರಾರ್ಜಿ ದೇಸಾಯಿ ಶಾಲೆಗಳಲ್ಲಿ ಪ್ರವೇಶ ಪಡೆದ ಒಟ್ಟು ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಪ್ರವೇಶ ಬಯಸಿ ಬಂದಿರುವ ಅರ್ಜಿಗಳೆಷ್ಟು? (ತಾಲ್ಲೂಕುವಾರು ವಿವರ ನೀಡುವುದು)

## "ಅರ್ಬನ್ ಇಕೋ" ಪಾರ್ಕ್ ಸ್ಥಾಪಿಸುವ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :-**

೧೫೦೩ (೧೯೦೧) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮಂಗಳೂರು ವಾಮಂಜೂರಿನಲ್ಲಿನ ಪಿಲಿಕುಳ ನಿಸರ್ಗಧಾಮದಲ್ಲಿರುವ ಪ್ರಾದೇಶಿಕ ವಿಜ್ಞಾನ ಕೇಂದ್ರದ "ಅರ್ಬನ್ ಇಕೋ" ಪಾರ್ಕ್‌ನ್ನು ಸ್ಥಾಪಿಸಲು ಎಷ್ಟು ಅನುದಾನ ಮಂಜೂರು

ಮಾಡಲಾಗಿದೆ; ಈ ಯೋಜನೆಗೆ ಯಾವ ತಂತ್ರಜ್ಞಾನವನ್ನು ಬಳಸಲು ಉದ್ದೇಶಿಸಲಾಗಿದೆ; (ವಿವರ ನೀಡುವುದು)

(ಆ) "ಅರ್ಬನ್ ಇಕೋ" ಪಾರ್ಕ್‌ಗೆ ಡಿಜಿಟಲ್ ಮಾದರಿಯ ತಂತ್ರಜ್ಞಾನ ಬಳಸಲು ಸರ್ಕಾರದ ನಿಲುವೇನು; ಈ ಯೋಜನೆಗೆ ತಗಲುವ ವೆಚ್ಚ ಎಷ್ಟು;

(ಇ) ರಾಜ್ಯದಲ್ಲಿ ಯಾವ ಯಾವ ಜಿಲ್ಲೆಗಳಲ್ಲಿ ಪ್ರಾದೇಶಿಕ ವಿಜ್ಞಾನ ಕೇಂದ್ರಗಳನ್ನು ಸ್ಥಾಪಿಸಲಾಗಿದೆ; ಎಷ್ಟು ಜಿಲ್ಲೆಗಳಲ್ಲಿ ಸ್ಥಾಪಿಸಲು ಉದ್ದೇಶಿಸಲಾಗಿದೆ; (ವಿವರ ನೀಡುವುದು)

(ಈ) ಮಂಗಳೂರಿನ ವಿಜ್ಞಾನ ಕೇಂದ್ರದಲ್ಲಿ ಎಷ್ಟು ಮಂದಿ ವಿದ್ಯಾರ್ಥಿಗಳು ಈವರೆಗೆ ಕೇಂದ್ರವನ್ನು ಸಂದರ್ಶಿಸಿದ್ದಾರೆ; ವಿಧಿಸಲಾಗಿರುವ ಪ್ರವೇಶ ಶುಲ್ಕ ಎಷ್ಟು?

## ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಹಾಸ್ಟೆಲು ಹಾಗೂ ಆಶ್ರಮ ಶಾಲೆಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೫೦೪ (೧೯೦೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಉಡುಪಿ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯು ಪ್ರಾರಂಭವಾಗಿ ನಿಲ್ಲಿಸಲ್ಪಟ್ಟಿರುವ ಹಾಸ್ಟೆಲ್ ಹಾಗೂ ಆಶ್ರಮ ಶಾಲೆಗಳ ಸಂಖ್ಯೆ ಎಷ್ಟು; ಅವು ಯಾವುವು; ಈ ಹಾಸ್ಟೆಲ್ ಮತ್ತು ಆಶ್ರಮ ಶಾಲೆಗಳನ್ನು ಮುಚ್ಚಲು ಕಾರಣವೇನು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಜಿಲ್ಲೆಯ ಸದರಿ ಇಲಾಖೆಯಿಂದ ಪ್ರಾರಂಭವಾಗಿ ನಿಲ್ಲಿಸಲ್ಪಟ್ಟಿರುವ ಹಾಸ್ಟೆಲ್ ಹಾಗೂ ಈ ಆಶ್ರಮ ಶಾಲೆಗಳ ಕಟ್ಟಡಗಳ ನಿರ್ವಹಣೆ ಹಾಗೂ ರಕ್ಷಣೆಯ ಹೊಣೆಯನ್ನು ಗ್ರಾಮ ಪಂಚಾಯಿತಿಗಳಿಗೆ ನೀಡಲಾಗುವುದೇ; ಇಲ್ಲವಾದಲ್ಲಿ, ಅವುಗಳ ರಕ್ಷಣೆಗೆ ಸರ್ಕಾರ ತೆಗೆದುಕೊಳ್ಳುವ ಕ್ರಮಗಳೇನು?

## ಎಂಡೋಸಲ್ಫಾನ್ ಪೀಡಿತರ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೫೦೫ (೧೯೦೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಉಡುಪಿ ಜಿಲ್ಲೆಯಲ್ಲಿರುವ ಎಂಡೋಸಲ್ಫಾನ್ ಪೀಡಿತರ ಸಂಖ್ಯೆ ಎಷ್ಟು; ಎಂಡೋಸಲ್ಫಾನ್ ಪೀಡಿತರಿಗೆ ಈ ಇಲಾಖೆಯಿಂದ ನೀಡಲಾಗುತ್ತಿರುವ ಸೌಲಭ್ಯ ಹಾಗೂ ಸವಲತ್ತುಗಳು ಯಾವುವು; (ತಾಲ್ಲೂಕುವಾರು, ಗ್ರಾಮ ಪಂಚಾಯತ್‌ವಾರು ಪೀಡಿತರ ಹೆಸರು, ವಿಳಾಸದೊಂದಿಗೆ ವಿವರ ನೀಡುವುದು)

(ಆ) ರಾಜ್ಯದಲ್ಲಿ ಕೃಷಿಗೆ ಬಳಸುತ್ತಿರುವ ಕೀಟನಾಶಕಗಳಲ್ಲಿ ಎಂಡೋಸಲ್ಫಾನ್ ಇರುವುದು ಇಲಾಖೆಯ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅಂತಹ ಕೀಟನಾಶಕ ತಯಾರಕರ ಮೇಲೆ ತೆಗೆದುಕೊಂಡ ಕ್ರಮಗಳೇನು; ಇಲ್ಲವಾದಲ್ಲಿ, ತನಿಖೆ ನಡೆಸಿ ಕ್ರಮ ಕೈಗೊಳ್ಳಲಾಗುವುದೇ;

(ಇ) ರಾಜ್ಯದಲ್ಲಿ ಅಕ್ರಮವಾಗಿ ಎಂಡೋಸಲ್ಫಾನ್ ಮಾರಾಟವಾಗುತ್ತಿರುವುದನ್ನು ನಿಯಂತ್ರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ಉಡುಪಿ ಜಿಲ್ಲೆಯಲ್ಲಿನ ಆಹಾರ, ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆಯಲ್ಲಿನ ಅಧಿಕಾರಿಗಳ ಹಾಗೂ ಸಿಬ್ಬಂದಿಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೫೦೬ (೧೯೦೭) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಉಡುಪಿ ಜಿಲ್ಲೆಯಲ್ಲಿನ ಈ ಇಲಾಖೆಯ ಕಛೇರಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳ ಹಾಗೂ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಕೊರತೆ ಇರುವ ಅಧಿಕಾರಿಗಳ ಮತ್ತು ಸಿಬ್ಬಂದಿಗಳ ಸಂಖ್ಯೆ ಎಷ್ಟು; ಈ ಕೊರತೆಯನ್ನು ತುಂಬಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಆ) ಜಿಲ್ಲೆಯಲ್ಲಿನ ಈ ಇಲಾಖೆಯ ಕಛೇರಿಗಳಲ್ಲಿ ತಾತ್ಕಾಲಿಕ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಅವರು ಕಾರ್ಯನಿರ್ವಹಿಸುತ್ತಿರುವ ಅವಧಿಯೆಷ್ಟು; (ಜಿಲ್ಲಾವಾರು, ತಾಲ್ಲೂಕುವಾರು ಸಿಬ್ಬಂದಿಗಳ ಹೆಸರು, ವಿಳಾಸ, ಸೇವೆಗೆ ಸೇರಿದ ಅವಧಿಯೊಂದಿಗೆ ವಿವರ ನೀಡುವುದು)

(ಇ) ಜಿಲ್ಲೆಯ ಈ ಇಲಾಖೆಗೆ ಅವಶ್ಯಕತೆ ಇರುವ ಹುದ್ದೆಗಳನ್ನು ಮತ್ತು ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ತುರ್ತು ಕ್ರಮ ಕೈಗೊಳ್ಳಲಾಗುವುದೇ?

## ತಾತ್ಕಾಲಿಕ ಹಾಗೂ ಖಾಯಂ ಪರವಾನಿಗೆಯೊಂದಿಗೆ ಪ್ರಾರಂಭವಾದ ಬಸ್ಸುಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೫೦೭ (೧೯೦೩) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಮೂರು ವರ್ಷಗಳಲ್ಲಿ ಉಡುಪಿ ಜಿಲ್ಲೆಯಲ್ಲಿ ತಾತ್ಕಾಲಿಕ ಹಾಗೂ ಖಾಯಂ ಪರವಾನಿಗೆಯೊಂದಿಗೆ ಹೊಸದಾಗಿ ಪ್ರಾರಂಭವಾದ ಹಗಲು ಮತ್ತು ರಾತ್ರಿ ಸಂಚಾರದ ಖಾಸಗಿ ಬಸ್ಸುಗಳ ಸಂಖ್ಯೆ ಎಷ್ಟು; ಅವು ಯಾವುವು; ಪರವಾನಿಗೆದಾರರು ಯಾರು; (ವರ್ಷಾವಾರು ಪ್ರಾರಂಭವಾದ ದಿನಾಂಕದೊಂದಿಗೆ ವಿವರ ನೀಡುವುದು)

(ಆ) ಈ ರೀತಿ ಹೊಸದಾಗಿ ಪ್ರಾರಂಭವಾದ ಹಗಲು ಮತ್ತು ರಾತ್ರಿ ಸಂಚಾರದ ಖಾಸಗಿ ಬಸ್ಸುಗಳ ಸಂಚಾರವನ್ನು ನಿಲುಗಡೆಗೊಳಿಸಿರುವ ಬಸ್ಸುಗಳ ಸಂಖ್ಯೆ ಎಷ್ಟು; ಅವು ಯಾವುವು; ಪರವಾನಿಗೆದಾರರು ಯಾರು; (ವರ್ಷಾವಾರು ನಿಲುಗಡೆಯಾದ ದಿನಾಂಕದೊಂದಿಗೆ ವಿವರ ನೀಡುವುದು)

(ಇ) ಈ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ತಾತ್ಕಾಲಿಕ ಹಾಗೂ ಖಾಯಂ ಪರವಾನಿಗೆಯೊಂದಿಗೆ ಹೊಸದಾಗಿ ಪ್ರಾರಂಭವಾದ ಹಗಲು ಮತ್ತು ರಾತ್ರಿ ಸಂಚಾರದ ಸರ್ಕಾರಿ ಬಸ್ಸುಗಳ ಸಂಖ್ಯೆ ಎಷ್ಟು; ಅವು ಯಾವುವು; (ವರ್ಷಾವಾರು ಪ್ರಾರಂಭವಾದ ದಿನಾಂಕದೊಂದಿಗೆ ವಿವರ ನೀಡುವುದು)

(ಈ) ಈ ರೀತಿ ಹೊಸದಾಗಿ ಪ್ರಾರಂಭವಾದ ಹಗಲು ಮತ್ತು ರಾತ್ರಿ ಸಂಚಾರದ ಸರ್ಕಾರಿ ಬಸ್ಸುಗಳಲ್ಲಿ ಸಂಚಾರವನ್ನು ನಿಲುಗಡೆಗೊಳಿಸಿರುವ ಸರ್ಕಾರಿ ಬಸ್ಸುಗಳ ಸಂಖ್ಯೆ ಎಷ್ಟು; ಅವು ಯಾವುವು; (ವರ್ಷಾವಾರು ನಿಲುಗಡೆಯಾದ ದಿನಾಂಕದೊಂದಿಗೆ ವಿವರ ನೀಡುವುದು)

(ಉ) ಈ ಜಿಲ್ಲೆಯಲ್ಲಿ ಖಾಸಗಿ ಬಸ್ಸುಗಳು ಲಾಭದಾಯಕವಾಗಿ ಸಂಚರಿಸುತ್ತಿದ್ದರೂ ಸಹ ಸರ್ಕಾರಿ ಬಸ್ಸುಗಳ ಸಂಚಾರವನ್ನು ನಷ್ಟದ ನೆಪ ಹೇಳಿ ನಿಲ್ಲಿಸುತ್ತಿರುವ ಕಾರಣವೇನು?

## ಮರಣೋತ್ತರ ಶವ ಪರೀಕ್ಷಾ ಕೇಂದ್ರಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೫೦೮ (೧೯೦೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಉಡುಪಿ ಜಿಲ್ಲೆಯಲ್ಲಿ ಮರಣೋತ್ತರ ಶವ ಪರೀಕ್ಷಾ ಕೇಂದ್ರವನ್ನು ಹೊಂದಿರುವ ಹಾಗೂ ಹೊಂದದೆ ಇರುವ ಸರ್ಕಾರಿ ಆಸ್ಪತ್ರೆಗಳು ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು; ಅವು

ಯಾವುವು; (ತಾಲ್ಲೂಕುವಾರು, ಆಸ್ಪತ್ರೆವಾರು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರವಾರು ವಿವರ ನೀಡುವುದು)

(ಆ) ಈ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಸರ್ಕಾರಿ ಆಸ್ಪತ್ರೆ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿರುವ ಮರಣೋತ್ತರ ಶವ ಪರೀಕ್ಷಾ ಕೇಂದ್ರಗಳಲ್ಲಿ ಮಾಡಲಾದ ಮರಣೋತ್ತರ ಶವ ಪರೀಕ್ಷೆಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು, ಸರ್ಕಾರಿ ಆಸ್ಪತ್ರೆವಾರು, ಪ್ರಾಥಮಿಕ ಆರೋಗ್ಯ ಕೇಂದ್ರವಾರು ವಿವರ ನೀಡುವುದು)

(ಇ) ಈ ಜಿಲ್ಲೆಯಲ್ಲಿ "ಡಿ"ಗ್ರೂಫ್ ನೌಕರರ ಕೊರತೆಯಿಂದಾಗಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಮರಣೋತ್ತರ ಶವ ಪರೀಕ್ಷೆಗಳನ್ನು ಮಾಡಲು ಸಾಧ್ಯವಾಗದಿರುವುದನ್ನು ಸರ್ಕಾರ ಗಮನಿಸಿದೆಯೇ; ಗಮನಿಸಿದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಳ್ಳುವ ಕ್ರಮಗಳೇನು; ಇಲ್ಲವಾದಲ್ಲಿ ಕಾರಣವೇನು?

## ಎಸ್.ಸಿ ಹಾಗೂ ಎಸ್.ಟಿ.ಯ ಶೈಕ್ಷಣಿಕ, ಆರ್ಥಿಕ ಹಾಗೂ ಸಾಮಾಜಿಕ ಕುರಿತು

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೭೯ (೧೯೧೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೪–೧೫ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಅಧ್ಯಯನದ

ಯೋಜನೆಗೆ ನಿಗಧಿಯಾಗಿದ್ದ ಹಣವೆಷ್ಟು; ನಿಗಧಿಯಾಗಿದ್ದ ಹಣದಲ್ಲಿ ರೂಪಿಸಿರುವ ಯೋಜನೆಗಳೇನು; ಇದರ ಫಲಾನುಭವಿಗಳು ಪಡೆದಿರುವ ಸವಲತ್ತುಗಳಾವುವು;

(ಆ) ಸಾಮಾಜಿಕ ವಲಯ, ಶೈಕ್ಷಣಿಕ ವಲಯ ಮತ್ತು ಆರ್ಥಿಕ ಅಭ್ಯುದಯ ಫಲಾನುಭವಿಗಳು ಯಾರು; (ಜಿಲ್ಲಾವಾರು ಫಲಾನುಭವಿಗಳ ವಿವರ ನೀಡುವುದು)

(ಇ) ರಾಜ್ಯಾದ್ಯಂತ ಅಂಬೇಡ್ಕರ್ ಭವನ ನಿರ್ಮಾಣ ಮಾಡಲು ಬಿಡುಗಡೆ ಮಾಡಿರುವ ಹಣವೆಷ್ಟು; ಎಲ್ಲೆಲ್ಲಿ ಅಂಬೇಡ್ಕರ್ ಭವನ ನಿರ್ಮಾಣ ಮಾಡಲಾಗಿದೆ? (ಜಿಲ್ಲಾವಾರು ವಿವರ ನೀಡುವುದು)

## ಸ್ವಯಂ ಉದ್ಯೋಗ ಸಾಲ ಯೋಜನೆಯಡಿಯಲ್ಲಿ ಸ್ವೀಕರಿಸಲಾದ ಅರ್ಜಿ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೫೧೦ (೧೯೦೯) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಚಿಕ್ಕಮಗಳೂರು ಜಿಲ್ಲೆಯಿಂದ ಸ್ವಯಂ ಉದ್ಯೋಗ ಸಾಲ ಯೋಜನೆಯಡಿಯಲ್ಲಿ ಸ್ವೀಕರಿಸಲಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಸರ್ಕಾರ ಕಳೆದ ೨ ವರ್ಷಗಳಲ್ಲಿ ಪ್ರತಿ ತಾಲ್ಲೂಕಿಗೆ ನಿಗಧಿಪಡಿಸಿರುವ ಗುರಿ ಎಷ್ಟು;

(ಇ) ಹಾಗಿದ್ದಲ್ಲಿ, ಬೇಡಿಕೆಗೆ ತಕ್ಕಂತೆ ಗುರಿ ಸಾಧಿಸದಿರಲು ಕಾರಣವೇನು;

(ಈ) ಸದರಿ ಅರ್ಜಿಗಳಿಗೆ ಎಷ್ಟು ವರ್ಷದಲ್ಲಿ ಬೇಡಿಕೆ ಈಡೇರಿಸಲಾಗುವುದು?

## ಮಂಜೂರಾಗಿರುವ ಅಂಬೇಡ್ಕರ್ ಭವನಗಳು

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೫೧೧ (೧೯೧೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಮಂಜೂರಾಗಿರುವ ಅಂಬೇಡ್ಕರ್ ಭವನಗಳೆಷ್ಟು; (ವಿವರ ಒದಗಿಸುವುದು)

(ಆ) ಸದರಿ ಭವನಗಳ ಕಟ್ಟಡ ಕಾಮಗಾರಿಗಳು ಪ್ರಾರಂಭಗೊಂಡಿವೆಯೇ; ಹಾಗಿದ್ದಲ್ಲಿ, ಕಾಮಗಾರಿಯ ಪ್ರಗತಿ ಬಗ್ಗೆ ವಿವರ ನೀಡುವುದು; ಸದರಿ ಕಾಮಗಾರಿಗೆ ಬಿಡುಗಡೆಯಾದ ಹಣವೆಷ್ಟು; ಆ ಪೈಕಿ ಖರ್ಚಾದ ಮೊತ್ತವೆಷ್ಟು; (ಕಾಮಗಾರಿವಾರು ವಿವರ ನೀಡುವುದು)

(ಇ) ಅಂಬೇಡ್ಕರ್ ಭವನದ ಸ್ಥಳ ಗುರುತಿಸಿದೆಯೇ; ಅರ್ಜಿ ಆಧಾರದ ಮೇಲೆ ಮಂಜೂರಾತಿ ನೀಡಿ, ಸ್ಥಳ ಇಲ್ಲದಿರುವುದಕ್ಕೆ ಕಾರಣಗಳೇನು;

(ಈ) ಮಂಜೂರಾಗಿರುವ ಅಂಬೇಡ್ಕರ್ ಭವನಗಳನ್ನು ಪೂರ್ಣ ಮಾಡಲು ತೆಗೆದುಕೊಂಡಿರುವ ಕ್ರಮಗಳೇನು?

## ಫ್ಲೋರೈಡ್ ಫ್ರೋ ರೋಗದಿಂದ ಬಳಲುತ್ತಿರುವವರು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-**

೧೫೧೨ (೧೯೧೩) ಮಾನ್ಯ ಅರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೋಲಾರ, ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಜನರು ಫ್ಲೋರೈಡ್ ಫ್ರೋ ರೋಗದಿಂದ ಬಳಲುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದರೆ, ಈ ರೋಗದಿಂದ ಜನರನ್ನು ಮುಕ್ತರನ್ನಾಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಇ) ಎಷ್ಟು ಜನರು ಈ ರೋಗದಿಂದ ಬಳಲುತ್ತಿದ್ದಾರೆ; (ಹಳ್ಳಿವಾರು ಮಾಹಿತಿ ನೀಡುವುದು)

(ಈ) ಈ ರೋಗದಿಂದ ಜನರನ್ನು ಮುಕ್ತರನ್ನಾಗಿಸಲು ಸರ್ಕಾರ ವಿಶೇಷ ಆಸ್ಪತ್ರೆಗಳನ್ನು ತೆರೆಯಲು ಚಿಂತಿಸಿದೆಯೇ ?

## ಶಿಷ್ಯವೇತನ ಜಾರಿಗೊಳಿಸುವ ಕುರಿತು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-**

೧೫೧೩ (೧೯೧೨) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಈ ರಾಜ್ಯದ ಬಡ ವಿದ್ಯಾರ್ಥಿಗಳಿಗೆ ಉನ್ನತ ವ್ಯಾಸಂಗಕ್ಕಾಗಿ ಶಿಷ್ಯ ವೇತನ ಜಾರಿಗೊಳಿಸಲು ಸರ್ಕಾರ ಯೋಚಿಸಿದೆಯೇ;

(ಆ) ಹಾಗಿದ್ದಲ್ಲಿ, ಈ ಶಿಷ್ಯ ವೇತನಕ್ಕೆ ಯಾವ ಯಾವ ಕೋರ್ಸ್‌ಗಳ ವಿದ್ಯಾರ್ಥಿಗಳು ಅರ್ಹರಿರುತ್ತಾರೆ;

(ಇ) ಎಷ್ಟು ಮೊತ್ತದ ಶಿಷ್ಯ ವೇತನವನ್ನು ಬಡ ವಿದ್ಯಾರ್ಥಿಗಳಿಗೆ ನೀಡಲಾಗುವುದು?

## ವಾಹನ ಗಣತಿ

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-**

೧೫೧೪ (೧೯೧೫) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದೇವನಹಳ್ಳಿಯಿಂದ ಕೋಲಾರದವರೆಗೂ ವಯಾ ಹೆಚ್-ಕ್ರಾಸ್‌ಗೆ ಹಾದು ಹೋಗುವ ರಸ್ತೆಯಲ್ಲಿ ಫೆಬ್ರವರಿ-೨೦೧೩ರಲ್ಲಿ ನಡೆಸಲಾದ ವಾಹನ ಗಣತಿ ಪ್ರಕಾರ ವಾಹನ ದಟ್ಟಣೆ ನಿಭಾಯಿಸಲು ಸಮರ್ಥವಿರುವುದಿಲ್ಲವೆಂದು ತಿಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಸದರಿ ರಸ್ತೆಯಲ್ಲಿ ವಾಹನ ದಟ್ಟಣೆ ನಿಭಾಯಿಸಲು ಸಮರ್ಥವಿಲ್ಲದೆ ಇದ್ದರೂ ಇಲ್ಲಿಯವರೆಗೂ ಈ ರಸ್ತೆಯನ್ನು ಮೇಲ್ದರ್ಜೆಗೇರಿಸದೇ ಇರುವುದಕ್ಕೆ ಕಾರಣಗಳೇನು;

(ಇ) ಯಾವ ಕಾಲಮಿತಿಯೊಳಗೆ ಸದರಿ ರಸ್ತೆಯನ್ನು ಮೇಲ್ದರ್ಜೆಗೇರಿಸಲು ಸರ್ಕಾರ ಕ್ರಮ ಕೈಗೊಳ್ಳುವುದು ?

## ಪ್ರಾದೇಶಿಕ ಅಸಮತೋಲನ ಹೆಚ್ಚಾಗುತ್ತಿರುವ ಕುರಿತು

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೫೧೫ (೧೯೧೬) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಡಾ: ಡಿ.ಎಂ.ನಂಜುಂಡಪ್ಪ ವರದಿಯ ಅನುಷ್ಠಾನದ ನಂತರದ ೧೦ ವರ್ಷಗಳ ಅವಧಿಯಲ್ಲಿ ಹಿಂದುಳಿದ ತಾಲ್ಲೂಕುಗಳ ಅಭಿವೃದ್ಧಿಗೆ ಸಂಬಂಧಿಸಿದಂತೆ ದಕ್ಷಿಣ ಮತ್ತು ಉತ್ತರ ಕರ್ನಾಟಕಗಳ ನಡುವಣ ಪ್ರಾದೇಶಿಕ ಅಸಮತೋಲನ ಹೆಚ್ಚಾಗಿದೆ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಈ ಅಸಮತೋಲನವನ್ನು ಸರಿದೂಗಿಸಲು ಸರ್ಕಾರವು ಕೈಗೊಳ್ಳುವ ಕ್ರಮಗಳೇನು:

(ಇ) ಉತ್ತರ ಕರ್ನಾಟಕದ ಸರ್ವಾಂಗೀಣ ಅಭಿವೃದ್ಧಿಗಾಗಿ ಹೆಚ್ಚಿನ ಬಂಡವಾಳವನ್ನು ಒದಗಿಸಿ "ವಿಶೇಷ ಕಾರ್ಯಯೋಜನೆ"ಯನ್ನು ಹಮ್ಮಿಕೊಳ್ಳಲಾಗುವುದೇ?

## ಪ್ರಾದೇಶಿಕ ಅಸಮತೋಲನ ನಿವಾರಣೆಗಾಗಿ "ವಿಶೇಷ ಅಭಿವೃದ್ಧಿ ನಿಧಿ" ಸ್ಥಾಪಿಸುವ ಕುರಿತು

**ಡಾ॥ ಮತ್ತಿಕಟ್ಟೆ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೫೧೬ (೧೯೨೬) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿನ ಪ್ರಾದೇಶಿಕ ಅಸಮತೋಲನವನ್ನು ಪರಿಹರಿಸುವ ಸಲುವಾಗಿ ಅಭಿವೃದ್ಧಿ ಕಾಮಗಾರಿಗಳ ಮೇಲ್ವಿಚಾರಣೆ ಮಾಡಲು ಉತ್ತರ ಕರ್ನಾಟಕದಲ್ಲಿ ಸಮಾಜ ವಿಜ್ಞಾನ ಸಂಶೋಧನಾ ಸಂಸ್ಥೆಯನ್ನು ಸ್ಥಾಪಿಸುವ ಅಗತ್ಯವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಧಾರವಾಡದಲ್ಲಿ ಸಮಾಜ ವಿಜ್ಞಾನ ಸಂಶೋಧನಾ ಸಂಸ್ಥೆಯನ್ನು ಸ್ಥಾಪಿಸಲಾಗುವುದೇ ;

(ಇ) ಪ್ರಾದೇಶಿಕ ಅಸಮತೋಲನವನ್ನು ಸರಿದೂಗಿಸಲು ಡಾ॥ ನಂಜುಂಡಪ್ಪರವರ ವರದಿ ಪ್ರಕಾರ, "ವಿಶೇಷ ಅಭಿವೃದ್ಧಿ ನಿಧಿ"ಯನ್ನು ಸ್ಥಾಪಿಸಲಾಗುವುದೇ?

## ಅಲೆಮಾರಿ ಮತ್ತು ಅರೆ ಅಲೆಮಾರಿ ಜನಾಂಗದವರ ಅಭಿವೃದ್ಧಿ

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೧೭ (೧೯೩೯) ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ಅಲೆಮಾರಿ ಮತ್ತು ಅರೆ ಅಲೆಮಾರಿ ಜನಾಂಗದ ಸದಸ್ಯರು ಮೂಲಭೂತ ಸೌಲಭ್ಯಗಳಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಈ ಜನಾಂಗದ ಅಭಿವೃದ್ಧಿಗಾಗಿ ಸರ್ಕಾರವು ಹಮ್ಮಿಕೊಂಡಿರುವ ಯೋಜನೆಗಳಾವುವು;

(ಇ) ಈ ಜನಾಂಗದವರಿಗಾಗಿ ಮನೆಗಳನ್ನು ಒದಗಿಸಿದಲ್ಲಿ ಅವರುಗಳು ಖಾಯಂ ಆಗಿ ಒಂದೇ ಸ್ಥಳದಲ್ಲಿ ವಾಸಿಸದೇ ಇದ್ದಲ್ಲಿ, ಸರ್ಕಾರದ ಯೋಜನೆ ವಿಫಲವಾಗುವ ಸಾಧ್ಯತೆ ಹೆಚ್ಚಾಗಿರುವುದಿಲ್ಲವೇ;

(ಈ) ಈ ಬಗ್ಗೆ ಸಾಮಾಜಿಕ ಅಧ್ಯಯನ ಕೈಗೊಂಡ ನಂತರ ಸೂಕ್ತ ಯೋಜನೆಯನ್ನು ಕಾರ್ಯಗತಗೊಳಿಸಲಾಗುವುದೇ?

## ಮೂಲಭೂತ ಸೌಕರ್ಯಗಳನ್ನು ಒದಗಿಸುವುದು

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೧೮ (೧೯೪೦) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ಮೂಲಭೂತ ಸೌಕರ್ಯಗಳು ಮತ್ತು ಸಿಬ್ಬಂದಿಗಳ ಕೊರತೆಯಿಂದಾಗಿ

ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಹೃದ್ರೋಗ, ಮಧುಮೇಹ, ಮೂತ್ರರೋಗ ಶಾಸ್ತ್ರ, ನರರೋಗ ಶಾಸ್ತ್ರ ಘಟಕಗಳ ಉನ್ನತೀಕರಣದೊಂದಿಗೆ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುವುದೇ;

(ಇ) ಸದರಿ ಸಂಸ್ಥೆಯಲ್ಲಿ ಎಲ್ಲಾ ವರ್ಗಗಳಲ್ಲಿ ಪ್ರಸ್ತುತ ಖಾಲಿ ಇರುವ ಹುದ್ದೆಗಳ ವಿವರಗಳನ್ನು ನೀಡುವುದು; ಸದರಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ಯಾವಾಗ?

## ಅಲೆಮಾರಿ ಜನಾಂಗದ ಅಭಿವೃದ್ಧಿ ಕುರಿತು

ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :-

೧೫೧೯ (೧೯೨೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತುರುವೇಕೆರೆ ತಾಲ್ಲೂಕಿನಲ್ಲಿರುವ ಅಲೆಮಾರಿ ಜನಾಂಗದವರ ಅಭಿವೃದ್ಧಿಗಾಗಿ ಹಮ್ಮಿಕೊಂಡಿರುವ ಕಾರ್ಯಕ್ರಮಗಳೇನು ;

(ಆ) ಕ್ಷೇತ್ರದ್ಯಾಂತ ಯಾವ್ಯಾವ ಊರುಗಳಲ್ಲಿದ್ದಾರೆ ;

(ಇ) ಕಳೆದ ಎರಡು ವರ್ಷಗಳಿಂದ ಸದರಿ ಅಲೆಮಾರಿ ಜನಾಂಗಕ್ಕೆ ಯಾವ ಯಾವ ಅನುಕೂಲತೆಗಳನ್ನು ಒದಗಿಸಲಾಗಿದೆ ? (ಸೌಲಭ್ಯವಾರು ವಿವರ ನೀಡುವುದು)

## ಗ್ರಾಮ ಪಂಚಾಯ್ತಿ ಜಾಗದಲ್ಲಿ ಸಮುದಾಯ ಭವನ ನಿರ್ಮಾಣ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :-**

೧೫೨೦ (೧೯೧೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತುಮಕೂರು ಜಿಲ್ಲೆಯ ತುರುವೇಕೆರೆ ಕ್ಷೇತ್ರದಿಂದ ಗ್ರಾಮ ಪಂಚಾಯ್ತಿಯ ಜಾಗದಲ್ಲಿ ಹಿಂದುಳಿದ ವರ್ಗಗಳ ಸಮುದಾಯ ಭವನಗಳನ್ನು ಕಟ್ಟಲು ಬೇಡಿಕೆ ಬಂದಿದೆಯೆ; ಅವು ಯಾವುವು; (ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಯಾವ-ಯಾವ ಗ್ರಾಮ ಪಂಚಾಯ್ತಿಗಳಿಂದ ನಿರ್ಣಯವನ್ನು ಕೈಗೊಂಡು ಅರ್ಜಿ ಸಲ್ಲಿಸಲಾಗಿದೆ;

(ಇ) ಈಗಾಗಲೇ, ತೆಗೆದುಕೊಂಡಿರುವ ಕ್ರಮಗಳೇನು;

(ಈ) ಇದಕ್ಕಾಗಿ ಎಷ್ಟು ಹಣ ಮಂಜೂರು ಮಾಡಲಾಗಿದೆ? (ಭವನವಾರು ವಿವರ ನೀಡುವುದು)

## ತುರುವೇಕೆರೆ ಆಸ್ಪತ್ರೆ ಉನ್ನತೀಕರಣ ಮಾಡುವ ಕುರಿತು

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :-**

೧೫೨೧ (೧೯೧೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತುರುವೇಕೆರೆ ನಗರ ಹಾಗೂ ತಾಲ್ಲೂಕಿನಲ್ಲಿರುವ ಆಸ್ಪತ್ರೆಗಳ ಸಂಖ್ಯೆ ಎಷ್ಟು; (ಮಾಹಿತಿ ನೀಡುವುದು)

(ಆ) ಹಲವಾರು ವರ್ಷಗಳಿಂದ ವೈದ್ಯರು, ಹಾಗೂ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಬಂದಿದ್ದಲ್ಲಿ, ಖಾಲಿ ಇರುವ ವೈದ್ಯರ ಹಾಗೂ ಸಿಬ್ಬಂದಿಗಳ ಸಂಖ್ಯೆ ಎಷ್ಟು; (ಆಸ್ಪತ್ರೆವಾರು, ಹುದ್ದೆವಾರು ವಿವರ ನೀಡುವುದು)

(ಇ) ಗ್ರಾಮೀಣ ಪ್ರದೇಶದ ಆಸ್ಪತ್ರೆಗಳಲ್ಲಿ ನಾಯಿ ಹಾಗೂ ಹಾವು ಕಡಿತ ಚಿಕಿತ್ಸೆಗೆ ಔಷಧದ ಕೊರತೆ ಇರುವುದು ನಿಜವೇ;

(ಈ) ಹಾಗಿದ್ದಲ್ಲಿ, ತುರ್ತು ಚಿಕಿತ್ಸೆ ಒದಗಿಸಲು ತೆಗೆದುಕೊಂಡಿರುವ ಕ್ರಮಗಳೇನು;

(ಉ) ಸದರಿ ಆಸ್ಪತ್ರೆಗಳಲ್ಲಿ ಶುಚಿತ್ವದ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ನಿಟ್ಟಿನಲ್ಲಿ ಕೈಗೊಂಡಿರುವ ಕ್ರಮಗಳಾವುವು? (ವಿವರ ನೀಡುವುದು)

## ತುರುವೇಕೆರೆ ತಾಲ್ಲೂಕಿನಲ್ಲಿರುವ ನ್ಯಾಯ ಬೆಲೆ ಅಂಗಡಿಗಳು

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೧೫೨೨ (೯೧೭) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುರುವೇಕೆರೆ ಕ್ಷೇತ್ರದಲ್ಲಿರುವ ನ್ಯಾಯ ಬೆಲೆ ಅಂಗಡಿಗಳೆಷ್ಟು; ಅವು ಯಾವುವು;

(ಆ) ನ್ಯಾಯ ಬೆಲೆ ಅಂಗಡಿಗಳಲ್ಲದೆ ಬೇರೆ ಯಾವ ಮೂಲದಲ್ಲಿ ಆಹಾರ ಪಡಿತರ ವಿತರಣೆ ಮಾಡಲಾಗುವುದು; (ವಿವರ ನೀಡುವುದು)

(ಇ) ವಿತರಣೆ ಮಾಡಲು ಇರುವ ಮಾನದಂಡಗಳೇನು;

(ಈ) ಸರಿಯಾದ ವ್ಯವಸ್ಥೆ ಮೂಲಕ ಪಡಿತರ ವಿತರಣೆ ಆಗುತ್ತಿದೆಯೇ?

## ಹಿಂದುಳಿದ ವರ್ಗಗಳ ಕಲ್ಯಾಣ ಕಾರ್ಯಕ್ರಮ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೨೩ (೧೯೨೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೪–೧೫ ಮತ್ತು ೨೦೧೫–೧೬ ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ಅನುಷ್ಠಾನಗೊಳಿಸುವ ವಿವಿಧ ಯೋಜನೆಗಳಿಗೆ ನಿಗಧಿಪಡಿಸಿದ ಆರ್ಥಿಕ, ಭೌತಿಕ ಗುರಿಗಳೆಷ್ಟು; (ಜಿಲ್ಲಾವಾರು, ಯೋಜನೆವಾರು, ವರ್ಷವಾರು ವಿವರ ನೀಡುವುದು)

(ಆ) ಜಿಲ್ಲಾವಾರು ಗುರಿಯನ್ನು ಯಾವ ಆಧಾರ, ಮಾನದಂಡದ ಮೇಲೆ ನಿಗಧಿಪಡಿಸಲಾಗುವುದು; (ವಿವರ ನೀಡುವುದು)

(ಇ) ಶೈಕ್ಷಣಿಕ ಸಾಲ, ವಿದೇಶಿ ಉನ್ನತ ವಿದ್ಯಾಭ್ಯಾಸ ಸಾಲವನ್ನು ನಿಗಧಿತ ಅವಧಿಯೊಳಗೆ ವಿದ್ಯಾರ್ಥಿಗಳಿಗೆ ಮಂಜೂರು ಮಾಡಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ;

(ಈ) ಹಿಂದಿನ ಸಾಲಿನಲ್ಲಿ ಅರ್ಜಿ ಸಲ್ಲಿಸಿ, ಸೌಲಭ್ಯ ಪಡೆಯದ ಅರ್ಜಿದಾರರಿಗೆ ಮುಂದಿನ ಸಾಲಿನ ಯೋಜನೆಯಲ್ಲಿ ಪರಿಗಣಿಸುವ ಬಗ್ಗೆ ಸರ್ಕಾರದ ನಿಲುವೇನು;

(ಉ) ಯೋಜನೆಯ ಸೌಲಭ್ಯ ಪಡೆಯಲು ಸರಳೀಕರಣಗೊಳಿಸುವ ಬಗ್ಗೆ ನಿಗಧಿತ ಅವಧಿಯಲ್ಲಿ ಸೌಲಭ್ಯಗಳು ಫಲಾನುಭವಿಗೆ ಮಂಜೂರು ಮಾಡಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ?

## ಅಂಬೇಡ್ಕರ್ ನಿವಾಸ ಯೋಜನೆ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೫೨೪ (೧೯೨೪) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ "ಅಂಬೇಡ್ಕರ್ ನಿವಾಸ" ಯೋಜನೆ ಜಾರಿಗೆ ತರಲು ಉದ್ದೇಶಿಸಿರುವುದು ನಿಜವೆ; ನಿಗಧಿಪಡಿಸಿದ ಗುರಿ ಎಷ್ಟು ;

(ಆ) "ಅಂಬೇಡ್ಕರ್ ನಿವಾಸ" ಯೋಜನೆಯ ವಿವರಗಳೇನು ;

(ಇ) ಇಂದಿನ ದಿನಗಳಲ್ಲಿ ದಿನಗೂಲಿಯೂ ಸೇರಿದಂತೆ, ಕಟ್ಟಡ ಸಾಮಗ್ರಿ, ವೆಚ್ಚಗಳು ಹೆಚ್ಚಾಗಿರುವುದರಿಂದ ಮನೆ ಘಟಕ ವೆಚ್ಚ ಹೆಚ್ಚಳ ಮಾಡಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ;

(ಈ) "ಅಂಬೇಡ್ಕರ್ ನಿವಾಸ" ಯೋಜನೆಯ ಫಲಾನುಭವಿಗಳು ಯಾರು; ಇತರೆ ಹಿಂದುಳಿದ ವರ್ಗಗಳ ಬಡ ವಸತಿ ರಹಿತರಿಗೆ ಮನೆ ಒದಗಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ? (ವಿವರ ನೀಡುವುದು)

## ವಿಜ್ಞಾನ ಕೇಂದ್ರದ ನಿರ್ಮಾಣದ ಪ್ರಗತಿ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೫೨೫ (೧೯೨೩) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಜೆಟ್‌ನಲ್ಲಿ ಈಗಾಗಲೇ ಘೋಷಿಸಿರುವಂತೆ ರಾಜ್ಯದಲ್ಲಿ ಎಲ್ಲೆಲ್ಲಿ "ವಿಜ್ಞಾನ ಕೇಂದ್ರ"ಗಳನ್ನು ಪ್ರಾರಂಭಿಸಲು ಉದ್ದೇಶಿಸಲಾಗಿದೆ ; (ವಿವರ ನೀಡುವುದು)

(ಆ) "ವಿಜ್ಞಾನ ಕೇಂದ್ರ" ನಿರ್ಮಾಣಕ್ಕೆ ನಿಗಧಿಪಡಿಸಿದ ಅನುದಾನ ಎಷ್ಟು ;

(ಇ) ಉಡುಪಿಯಲ್ಲಿ "ವಿಜ್ಞಾನ ಕೇಂದ್ರ" ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ ಯಾವ ಹಂತದಲ್ಲಿದೆ ;

(ಈ) ಉಡುಪಿಯಲ್ಲಿ "ವಿಜ್ಞಾನ ಕೇಂದ್ರ" ನಿರ್ಮಾಣಕ್ಕೆ ಬಿಡುಗಡೆಯಾದ ಅನುದಾನ ಎಷ್ಟು ; ಯಾವ ಯಾವ ಕಾಮಗಾರಿಗೆ ಅನುದಾನ ಬಿಡುಗಡೆ ಮಾಡಲಾಗಿದೆ ; ಪ್ರಸ್ತುತ ಕಾಮಗಾರಿಗಳ ಪ್ರಗತಿ ಯಾವ ಹಂತದಲ್ಲಿದೆ ? (ಕಾಮಗಾರಿಯ ವಿವರ ನೀಡುವುದು)

## ಆಹಾರ ಸುರಕ್ಷತಾ ಕಾಯ್ದೆಯ ಅನುಷ್ಠಾನ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೫೨೬ (೧೯೨೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಆರೋಗ್ಯ ಇಲಾಖೆಯಲ್ಲಿನ ಆಹಾರ ಸುರಕ್ಷತಾ ವಿಭಾಗದಲ್ಲಿನ ಎಲ್ಲಾ ಹುದ್ದೆಗಳಿಗೆ ಸಂಬಂಧಪಟ್ಟಂತೆ ವೃಂದ ಮತ್ತು ನೇಮಕಾತಿ

ನಿಯಮಗಳನ್ನು ರಚಿಸಲಾಗಿದೆಯೇ; ಇಲ್ಲದಿದ್ದಲ್ಲಿ, ವಿಳಂಬಕ್ಕೆ ಕಾರಣವೇನು ;

(ಆ) ಹಾಗಿದ್ದಲ್ಲಿ, ಈಗಾಗಲೇ ಅಸ್ತಿತ್ವದಲ್ಲಿರುವ ಕಾರ್ಯಕಾರಿ ಆದೇಶದಂತೆ ಆಹಾರ ಸುರಕ್ಷತಾ ಅಧಿಕಾರಿಗಳಿಗೆ, ಒಟ್ಟು ೩೬ ಅಂಕಿತ ಅಧಿಕಾರಿಗಳ ಹುದ್ದೆಗಳ ಪೈಕಿ ೫೦% ರಷ್ಟು ಅಂದರೆ ೧೮ ಅಂಕಿತ ಅಧಿಕಾರಿಗಳ ಹುದ್ದೆಗಳನ್ನು ಪದೋನ್ನತಿ ಮೂಲಕ ತುಂಬಲು ಅವಕಾಶ ನೀಡಲಾಗುವುದೇ; (ವಿವರ ನೀಡುವುದು)

(ಇ) ಅಸ್ತಿತ್ವದಲ್ಲಿರುವ ಕಾರ್ಯಕಾರಿ ಆದೇಶವನ್ನು ಬದಿಗೊತ್ತಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸಿ ಆಹಾರ ಸುರಕ್ಷಿತ ಅಧಿಕಾರಿಗಳಿಗೆ ಅನ್ಯಾಯ ಎಸಗುವ ಪ್ರಯತ್ನವನ್ನು ಕೆಲವು ಹಿರಿಯ ಅಧಿಕಾರಿಗಳು ನಡೆಸುತ್ತಿದ್ದು, ಆಹಾರ ಸುರಕ್ಷತಾಧಿಕಾರಿಗಳ ಹಿತರಕ್ಷಣೆಗೆ ಸರ್ಕಾರ ಯಾವ ಕ್ರಮ ಕೈಗೊಳ್ಳುವುದು ;

(ಈ) ಪ್ರಸ್ತುತ ಪ್ರಭಾರಿ ಅಂಕಿತ ಅಧಿಕಾರಿಗಳಾಗಿ ಕಾರ್ಯನಿರ್ವಹಿಸುತ್ತಿರುವ ೩೬ ಆಹಾರ ಸುರಕ್ಷತಾಧಿಕಾರಿಗಳನ್ನು "ಖಾಯಂ" ಅಂಕಿತ ಅಧಿಕಾರಿಗಳನ್ನಾಗಿ ನೇಮಕ ಮಾಡಲು ಕ್ರಮ ಕೈಗೊಳ್ಳಲಾಗುವುದೇ ? (ವಿವರ ನೀಡುವುದು)

## ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸುವ ಕುರಿತು

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೧೫೨೭ (೧೯೨೯) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪ್ರಸಕ್ತ ಸಾಲಿನಲ್ಲಿ ಹೊಸ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಆ) ೨೦೧೩-೧೪, ೨೦೧೪-೧೫ನೇ ಸಾಲಿನಲ್ಲಿ ಪ್ರಾರಂಭಿಸಲಾಗಿರುವ ಹೊಸ ವೈದ್ಯಕೀಯ ಕಾಲೇಜುಗಳ ಸಂಖ್ಯೆ ಎಷ್ಟು; ಇವುಗಳಲ್ಲಿ ಸರ್ಕಾರಿ ಕಾಲೇಜುಗಳು ಮತ್ತು ಖಾಸಗಿ ಕಾಲೇಜುಗಳ ಸಂಖ್ಯೆ ಎಷ್ಟು;

(ಇ) ನೂತನವಾಗಿ ಸ್ಥಾಪಿಸಿರುವ ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ ಅವಕಾಶ ಕಲ್ಪಿಸಲಾಗಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಹಾಗಿದ್ದಲ್ಲಿ, ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಸರ್ಕಾರಿ ಆಸ್ಪತ್ರೆಗಳಲ್ಲಿ ಖಾಲಿ ಇರುವ ವೈದ್ಯಾಧಿಕಾರಿಗಳ ಹುದ್ದೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು):-**

೧೫೨೮ (೧೯೩೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ವಿವಿಧ ಸರ್ಕಾರಿ ಆಸ್ಪತ್ರೆ, ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಪ್ರಾಥಮಿಕ ಆರೋಗ್ಯ ಘಟಕಗಳಲ್ಲಿ ಖಾಲಿ ಇರುವ ವೈದ್ಯಾಧಿಕಾರಿಗಳ ಹಾಗೂ ಸಿಬ್ಬಂದಿಗಳ ಹುದ್ದೆಗಳ ಸಂಖ್ಯೆ ಎಷ್ಟು;

(ಆ) ಪ್ರಸ್ತುತ ಇವತ್ತಿನ ದಿನಗಳಲ್ಲಿ ಹೆಚ್ಚುತ್ತಿರುವ ಮಾರಕ ಸಾಂಕ್ರಾಮಿಕ ರೋಗಗಳ ನಿಯಂತ್ರಣಕ್ಕಾಗಿ ಸರ್ಕಾರ ಖಾಲಿ ಇರುವ ವೈದ್ಯಾಧಿಕಾರಿಗಳ ಹುದ್ದೆಗಳನ್ನು ತುಂಬಲು ತೆಗೆದುಕೊಂಡ ತುರ್ತು ಕ್ರಮಗಳೇನು ? (ವಿವರ ನೀಡುವುದು)

## ಅಕ್ರಮವಾಗಿ ಸೀಮೆಎಣ್ಣೆ ಮಾರಾಟದ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೧೫೨೯ (೧೯೩೨) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಅಧಿಕೃತ ಸೀಮೆಎಣ್ಣೆ ವಿತರಣಾ ಡೀಲರ್‌ಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ನ್ಯಾಯಬೆಲೆ ಅಂಗಡಿಗೆ ವಿತರಣೆ ಮಾಡಿರುವ ಸೀಮೆಎಣ್ಣೆ ಪ್ರಮಾಣಕ್ಕೂ ಡೀಲರ್‌ಗಳಿಗೆ ಹಂಚಿಕೆ ಮಾಡಿದ ಸೀಮೆಎಣ್ಣೆ ಪ್ರಮಾಣದಲ್ಲಿ ಬಾರಿ ವ್ಯತ್ಯಾಸವಿರುವುದು ಸರ್ಕಾರ ಗಮನಿಸಿದೆಯೇ;

(ಇ) ಹಾಗಿದ್ದಲ್ಲಿ ಇದನ್ನು ಸರಿಪಡಿಸಲು ಸರ್ಕಾರ ಯಾವ ರೀತಿಯ ಕ್ರಮಗಳನ್ನು ಕೈಗೊಂಡಿದೆ ?

## ಹಿಂದುಳಿದ ವರ್ಗಗಳ ವಸತಿ ನಿಲಯಗಳು

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೧೫೩೦ (೧೯೩೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ವಿವಿಧ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಪ್ರಸಕ್ತ ಸಾಲಿನಲ್ಲಿ ವಸತಿ ಸೌಲಭ್ಯಕ್ಕಾಗಿ ಅರ್ಜಿ ಸಲ್ಲಿಸಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು;

(ಇ) ಬಹಳಷ್ಟು ಬಡ ವಿದ್ಯಾರ್ಥಿಗಳಿಗೆ ಸದರಿ ವಸತಿ ನಿಲಯಗಳಲ್ಲಿ ವಸತಿ ಸೌಲಭ್ಯ ಸಿಗದೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಈ ವಸತಿ ನಿಲಯಗಳಲ್ಲಿ ಹೆಚ್ಚಿನ ವಿದ್ಯಾರ್ಥಿಗಳಿಗೆ ವಸತಿ ಸೌಲಭ್ಯ ಒದಗಿಸಲು ಸೂಕ್ತ ಕ್ರಮ ಕೈಗೊಳ್ಳಲು ಸರ್ಕಾರಕ್ಕೆ ಇರುವ ಅಡೆತಡೆಗಳೇನು ?

## ಮೈಸೂರು ಜಿಲ್ಲೆಗೆ ಸಾರ್ವಜನಿಕ ಜಿಲ್ಲಾ ಆಸ್ಪತ್ರೆ ಇಲ್ಲದಿರುವ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):-**

೧೫೩೧ (೧೯೩೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮೈಸೂರು ಜಿಲ್ಲೆಯಲ್ಲಿ ಸಾರ್ವಜನಿಕ ಜಿಲ್ಲಾ ಆಸ್ಪತ್ರೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಇದರಿಂದ ಬಡರೋಗಿಗಳಿಗೆ ತೊಂದರೆ ಉಂಟಾಗುತ್ತಿರುವುದು ನಿಜವಲ್ಲವೆ;

(ಇ) ಹಾಗಿದ್ದಲ್ಲಿ, ಸಾರ್ವಜನಿಕ ಜಿಲ್ಲಾ ಆಸ್ಪತ್ರೆ ಪ್ರಾರಂಭ ಮಾಡಲು ಸರ್ಕಾರ ಚಿಂತಿಸಿದೆಯೇ;

(ಈ) ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಉ) ಸಾರ್ವಜನಿಕ ಜಿಲ್ಲಾ ಆಸ್ಪತ್ರೆಯನ್ನು ಯಾವ ಸ್ಥಳದಲ್ಲಿ ಎಷ್ಟು ವೆಚ್ಚದಲ್ಲಿ ನಿರ್ಮಿಸಲು ಉದ್ದೇಶಿಸಲಾಗಿದೆ; ಯಾವ ಕಾಲಾವಧಿಯಲ್ಲಿ ಪ್ರಾರಂಭಿಸಲಾಗುವುದು ? (ವಿವರ ನೀಡುವುದು)

# ರಾಜ್ಯದ ಸಾರ್ವಜನಿಕ ಜಿಲ್ಲಾ ಆಸ್ಪತ್ರೆಗಳಲ್ಲಿ ಖಾಲಿ ಇರುವ ಹುದ್ದೆಗಳು

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):-**

೧೫೩೨ (೧೯೩೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಸಾರ್ವಜನಿಕ ಜಿಲ್ಲಾ ಆಸ್ಪತ್ರೆಗಳಲ್ಲಿ ಖಾಲಿ ಇರುವ ತಜ್ಞ ವೈದ್ಯರು ಹಾಗೂ ವೈದ್ಯರುಗಳ ಸಂಖ್ಯೆ ಎಷ್ಟು; ಸದರಿ ಹುದ್ದೆಗಳು ಯಾವಾಗಿನಿಂದ ಖಾಲಿ ಇವೆ; (ಜಿಲ್ಲಾವಾರು, ವರ್ಗವಾರು ವಿವರ ನೀಡುವುದು)

(ಆ) ಸದರಿ ಸಾರ್ವಜನಿಕ ಆಸ್ಪತ್ರೆಗಳಲ್ಲಿ ಖಾಲಿ ಇರುವ ಶುಶ್ರೂಷಕಿಯರು ಹಾಗೂ ತಂತ್ರಜ್ಞರ ಹುದ್ದೆಗಳ ಸಂಖ್ಯೆ ಎಷ್ಟು; ಯಾವ ಸಮಯದಿಂದ ಖಾಲಿ ಇವೆ; (ವರ್ಗವಾರು, ಜಿಲ್ಲಾವಾರು, ಮಾಹಿತಿ ನೀಡುವುದು)

(ಇ) ಸದರಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಲಾಗುವುದು;

(ಈ) ಸದರಿ ಸಾರ್ವಜನಿಕ ಜಿಲ್ಲಾ ಆಸ್ಪತ್ರೆಗಳಲ್ಲಿ ಕೊರತೆಯಿರುವ ಮೂಲಭೂತ ಸೌಲಭ್ಯಗಳು ಯಾವುವು; (ಜಿಲ್ಲಾವಾರು ವಿವರ ನೀಡುವುದು)

(ಉ) ಸದರಿ ಮೂಲಭೂತ ಸೌಲಭ್ಯಗಳಿಗೆ ಪ್ರಸಕ್ತ ಸಾಲಿನಲ್ಲಿ ಒದಗಿಸಿರುವ ಮೊತ್ತವೆಷ್ಟು ? (ಜಿಲ್ಲಾವಾರು ಮಾಹಿತಿ ನೀಡುವುದು)

## ಕೆ.ಆರ್.ಐ.ಇ.ಎಸ್. ಸಂಸ್ಥೆಯಲ್ಲಿ ಶಿಕ್ಷಕರನ್ನು ನೇಮಕ ಮಾಡಿರುವ ವಿವರ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):-**

೧೫೩೩ (೧೯೩೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳಲ್ಲಿ ಹೊರಗುತ್ತಿಗೆ ಮೂಲಕ ಕಾರ್ಯನಿರ್ವಹಿಸುತ್ತಿದ್ದ ಶಿಕ್ಷಕರಿಗೆ ಎಷ್ಟು ರೂಪಾಯಿಗಳನ್ನು ನೀಡಬೇಕೆಂದು ಮಾನ್ಯ ಉಚ್ಚನ್ಯಾಯಾಲಯವು ಆದೇಶಿಸಿದೆ; (ವಿವರವಾಗಿ, ನ್ಯಾಯಾಲಯದ ತೀರ್ಪಿನ ಪ್ರತಿಯೊಂದಿಗೆ ಮಾಹಿತಿ ಕೊಡುವುದು)

(ಆ) ನ್ಯಾಯಾಲಯದ ಆದೇಶಾನುಸಾರ ಯಾವ ದಿನಾಂಕದಿಂದ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ತಯಾರಿಸಲು ಪ್ರಾರಂಭಿಸಲಾಗಿದೆ;

(ಇ) ಅಂತಿಮ ಆಯ್ಕೆ ಪಟ್ಟಿಯನ್ನು ಯಾವ ದಿನಾಂಕದಂದು ಪ್ರಕಟಿಸಲಾಗಿದೆ;

(ಈ) ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿ ಆಯ್ಕೆಗೊಂಡು ಅಂತಿಮ ಆಯ್ಕೆ ಪಟ್ಟಿಯಲ್ಲಿ ಎಷ್ಟು ಅಭ್ಯರ್ಥಿಗಳನ್ನು ಕೈಬಿಡಲಾಗಿದೆ; (ವಿವರವಾಗಿ ಹೆಸರು, ಕಾರಣ ಸಮೇತ ಮಾಹಿತಿ ನೀಡುವುದು)

(ಉ) ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿ ಆಯ್ಕೆಯಾಗದೆ ನೇರವಾಗಿ ಅಂತಿಮ ಆಯ್ಕೆ ಪಟ್ಟಿಯಲ್ಲಿ ಎಷ್ಟು ಅಭ್ಯರ್ಥಿಗಳು ಆಯ್ಕೆಯಾಗಿದ್ದಾರೆ? (ವಿವರವಾರು ಹೆಸರು ಕಾರಣ ಸಮೇತ ಮಾಹಿತಿ ನೀಡುವುದು)

## ವಸತಿ ಶಿಕ್ಷಣ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿ ವೇತನ ಬಡ್ತಿ ಕುರಿತು

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :-**

೧೫೩೪ (೧೯೩೭) ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ವಸತಿ ಶಿಕ್ಷಣ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರಿಗೆ ಇಲ್ಲಿಯವರೆಗೆ ಎಷ್ಟು ವೇತನ ಬಡ್ತಿಗಳನ್ನು ನೀಡಲಾಗಿದೆ;

(ಆ) ಬಾಕಿ ಇರುವ ವೇತನ ಬಡ್ತಿಗಳನ್ನು ಮಂಜೂರು ಮಾಡಲು ಇರುವ ತೊಂದರೆಗಳೇನು;

(ಇ) ವಸತಿ ಶಿಕ್ಷಣ ಸಂಸ್ಥೆಗಳ ನೌಕರರ ಅಂತಿಮ ಜೇಷ್ಠತಾ ಪಟ್ಟಿಯನ್ನು ತಯಾರಿಸಿ ಪ್ರಕಟಿಸಲು ವಿಳಂಬವಾಗಲು ಕಾರಣಗಳೇನು;

(ಈ) ಯಾವಾಗ ಅಂತಿಮ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗುವುದು?

## ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಯಲ್ಲಿ ಗುತ್ತಿಗೆ ಶಿಕ್ಷಕರನ್ನು ಖಾಯಂ ಮಾಡುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :-**

೧೫೩೫ (೧೯೩೬) ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳಲ್ಲಿ ಎಷ್ಟು ಶಿಕ್ಷಕರನ್ನು ಯಾವ ದಿನಾಂಕದಂದು ಯಾವ ರೀತಿ ಗುತ್ತಿಗೆಯಡಿ ನೇಮಕ ಮಾಡಿಕೊಳ್ಳಲಾಗಿತ್ತು; (ವಿವರವಾದ ಮಾಹಿತಿ ನೀಡುವುದು)

(ಆ) ಸದರಿ ಶಿಕ್ಷಕರನ್ನು ಯಾವ ದಿನಾಂಕದಂದು ಯಾವ ಆದೇಶದ ಮೇಲೆ ಸಂಸ್ಥೆಯ ಸೇವೆಯಲ್ಲಿ ಖಾಯಂ ಆಗಿ

ವಿಲೀನಗೊಳಿಸಲಾಗಿದೆ; (ಆದೇಶದ ಪ್ರತಿಯೊಂದಿಗೆ ಮಾಹಿತಿ ಕೊಡುವುದು)

(ಇ) ಈ ಶಿಕ್ಷಕರ ನೇಮಕಾತಿಯ ಪ್ರಕ್ರಿಯೆಗಳಿಗೆ ಮಾನ್ಯ ಸರ್ವೋಚ್ಚನ್ಯಾಯಾಲಯವು ಉಮಾದೇವಿ ಪ್ರಕರಣದಲ್ಲಿ ನೀಡಿರುವ "ಕಾನೂನು ಪರಿನಿಯಮಗಳು" ಅನ್ವಯವಾಗುವುದಿಲ್ಲವೆ;

(ಈ) ಅನ್ವಯವಾದರೆ ಯಾವ ರೀತಿ ನೇಮಕಾತಿ ಮಾಡಲಾಗಿದೆ;

(ಉ) ಅನ್ವಯವಾಗದಿದ್ದರೆ ಯಾವ ರೀತಿ ಅನ್ವಯಿಸುವುದಿಲ್ಲ?

## ರಾಯಚೂರು ಜಿಲ್ಲೆಯಿಂದ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಬಂದಿರುವ ಪ್ರಸ್ತಾವನೆ ಕುರಿತು.

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೧೫೩೬ (೧೯೪೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಯಚೂರು ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ೨೦೧೫-೧೬ ನೇ ಸಾಲಿನಲ್ಲಿ ಹಾಕಿಕೊಂಡ ಕಾರ್ಯಕ್ರಮಗಳು ಯಾವುವು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಹಿಂದುಳಿದ ವರ್ಗಗಳ ಅನುಕೂಲಕ್ಕಾಗಿ ರಾಯಚೂರು ಜಿಲ್ಲೆಯಲ್ಲಿ ಸ್ವೀಕೃತವಾಗಿರುವ ಪ್ರಸ್ತಾವನೆಗಳು ಎಷ್ಟು; (ವಿವರ ನೀಡುವುದು)

(ಇ) ೨೦೧೫-೧೬ನೇ ಸಾಲಿನಲ್ಲಿ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಈ ಎರಡು ಇಲಾಖೆಗಳಿಗೆ ವಸತಿ ಶಾಲೆಗಳ ಮಂಜೂರಾತಿಗಾಗಿ ರಾಯಚೂರು ಜಿಲ್ಲೆಯಿಂದ ಬಂದಿರುವ ಪ್ರಸ್ತಾವನೆಗಳೆಷ್ಟು; ಇದರ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು?

## ಮೂಲಭೂತ ಸೌಲಭ್ಯಗಳ ಕುರಿತು

**ಶ್ರೀ ಎಸ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೧೫೩೭ (೧೯೪೨) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) **NEKSRTC** ಸಂಸ್ಥೆಯ ವ್ಯಾಪ್ತಿಯಲ್ಲಿ ಬರುವ ಬಸ್‌ನಿಲ್ದಾಣಗಳಾದ ರಾಯಚೂರು ಮತ್ತು ಮಾನ್ವಿ ಮುಂತಾದ ಪ್ರದೇಶಗಳಲ್ಲಿ ಮೂಲಭೂತ ಸೌಲಭ್ಯಗಳಾದ ಕುಡಿಯುವ ನೀರು ಮತ್ತು ಶೌಚಾಲಯಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು;

(ಆ) **NEKSRTC** ವ್ಯಾಪ್ತಿಗೆ ಬರುವ ಪ್ರದೇಶದಲ್ಲಿ ಬೇಸಿಗೆ ಸಮಯದಲ್ಲಿ ಅತೀ ಹೆಚ್ಚು ಉಷ್ಣತೆ ೪೦ ರಿಂದ ೪೫ ಡಿಗ್ರಿ ಇದ್ದು, ಇದನ್ನು ಗಮನದಲ್ಲಿಟ್ಟುಕೊಂಡು ಎಕ್ಸ್‌ಪ್ರೆಸ್ ಬಸ್‌ಗಳಲ್ಲಿ ಎ.ಸಿ. ಅಳವಡಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ; ಇದ್ದಲ್ಲಿ, ಯಾವ ಕಾಲಮಿತಿಯೊಳಗೆ ಅಳವಡಿಸಲು ಕ್ರಮ ಕೈಗೊಳ್ಳಲಾಗುವುದು?

## ಪ್ರವಾಸಿಗರಿಗೆ ತೊಡಕಾಗಿರುವ ವಾಹನಗಳ ಬಗ್ಗೆ.

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) :-**

೧೫೩೮ (೧೯೪೪) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಹೊರ ರಾಜ್ಯಗಳಿಂದ ಕರ್ನಾಟಕ ರಾಜ್ಯದ ಒಳಗೆ ಆಗಮಿಸುವ ವಾಹನಗಳು ಯಾವ್ಯಾವ ದರದಲ್ಲಿ ಯಾವ್ಯಾವ ತೆರಿಗೆಗಳನ್ನು ಕರ್ನಾಟಕ ಸರ್ಕಾರಕ್ಕೆ ಪಾವತಿಸಬೇಕಿದೆ; (ವಾಹನಗಳವಾರು ದರಗಳ ಮಾಹಿತಿ ನೀಡುವುದು)

—

(ಆ) ಕರ್ನಾಟಕದ ಸುತ್ತಮುತ್ತಲಿನ ಹೊರ ರಾಜ್ಯಗಳಲ್ಲಿ ಈ ತೆರಿಗೆಗಳ ಪ್ರಮಾಣ ಎಷ್ಟಿದೆ; (ವಿವರಗಳನ್ನು ನೀಡುವುದು)

(ಇ) ಕರ್ನಾಟಕ ರಾಜ್ಯದ ತೆರಿಗೆಯ ದರಗಳು ಜಾಸ್ತಿ ಇರುವುದರಿಂದ ರಾಜ್ಯದ ಪ್ರವಾಸಿ ತಾಣಗಳಿಗೆ ಆಗಮಿಸುವ ಪ್ರಯಾಣಿಕರಿಗೆ ತೊಂದರೆಯಾಗುವುದಿಲ್ಲವೇ; ಪ್ರವಾಸಿ ತಾಣಗಳಿಗೆ ಮತ್ತು ಪುಣ್ಯಕ್ಷೇತ್ರಗಳಿಗೆ ಆಗಮಿಸುವ ಪ್ರಯಾಣಿಕರ ಅನುಕೂಲಕ್ಕಾಗಿ ಮತ್ತು ರಾಜ್ಯದ ಪ್ರವಾಸಿ ತಾಣಗಳ ಪ್ರಚಾರಕ್ಕಾಗಿ ಈ ತೆರಿಗೆಗಳನ್ನು ಕಡಿಮೆ ಮಾಡಲು ಸರ್ಕಾರ ಚಿಂತಿಸುವುದೆ?

## ತಿ.ನರಸೀಪುರ ಸಾರ್ವಜನಿಕ ಆಸ್ಪತ್ರೆ ಸ್ವಚ್ಛತೆ

**ಶ್ರೀ ಎಸ್.ನಾಗರಾಜು (ಸಂದೇಶ್ ನಾಗರಾಜ್)**
**(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೫೩೯ (೧೪೦೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:

(ಅ) ತಿ.ನರಸೀಪುರ ಸಾರ್ವಜನಿಕ ಆಸ್ಪತ್ರೆ ಆವರಣದಲ್ಲಿ ತ್ಯಾಜ್ಯ ಕಲುಷಿತ ನೀರು (ಚರಂಡಿ ನೀರು) ಸಂಗ್ರಹವಾಗಿ ಕೊಳೆತು ಸೊಳ್ಳೆ ಹಾಗೂ ಕ್ರಿಮಿ ಕೀಟಗಳ ಉತ್ಪತ್ತಿ ಆಗಿ ರೋಗಿಗಳಿಗೆ ಸಾರ್ವಜನಿಕರಿಗೆ ತೊಂದರೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಆಸ್ಪತ್ರೆಯಲ್ಲಿ ವೈದ್ಯರು ಮತ್ತು ಔಷಧಿಗಳ ಕೊರತೆ ಇದೆಯೇ; ಇದ್ದಲ್ಲಿ, ಇದನ್ನು ಪರಿಹರಿಸಲು ಕೈಗೊಂಡ ಕ್ರಮಗಳೇನು;

(ಇ) ಒಳಚರಂಡಿ ವ್ಯವಸ್ಥೆಯನ್ನು ಸರಿಪಡಿಸಿ ಆಸ್ಪತ್ರೆ ಆವರಣದಲ್ಲಿ ನಿಂತಿರುವ ಕಲುಷಿತ ನೀರನ್ನು ಹೊರಹಾಕಿ ಆಸ್ಪತ್ರೆ ಆವರಣವನ್ನು ಎತ್ತರಿಸಿ ಕಾಂಕ್ರೀಟ್ ಮಾಡಿ ಶುಚಿಯಾದ ವಾತಾವರಣ ಕಲ್ಪಿಸಲಾಗುವುದೇ?

## ಸಮಾಜ ಕಲ್ಯಾಣ ಇಲಾಖೆಯ ಕಾಮಗಾರಿಗಳಿಗೆ ಅನುದಾನ ಒದಗಿಸುವ ಕುರಿತು.

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೫೪೦ (೧೯೨೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೊಪ್ಪಳ ಜಿಲ್ಲೆಗೆ ೨೦೧೩-೧೪ ರಿಂದ ಪ್ರಸಕ್ತ ಸಾಲಿನವರೆಗೂ ಸಮಾಜ ಕಲ್ಯಾಣ ಇಲಾಖೆಗೆ ಮಂಜೂರಾದ ಅನುದಾನದ ಮೊತ್ತವೆಷ್ಟು; ಯಾವ ಯಾವ ತಾಲ್ಲೂಕಿಗೆ ಎಷ್ಟು ಹಣ ಮಂಜೂರಾಗಿರುತ್ತದೆ; (ಮಾಹಿತಿ ನೀಡುವುದು)

(ಆ) ಕೊಪ್ಪಳ ಜಿಲ್ಲೆಯಲ್ಲಿ ಈ ಸಾಲಿನಲ್ಲಿ ಕೈಗೊಂಡ ಕಾಮಗಾರಿಗಳಾವುವು; ಸದರಿ ಕಾಮಗಾರಿಗಳಿಗೆ ಮಂಜೂರಾದ ಹಣವೆಷ್ಟು; (ಕಾಮಗಾರಿವಾರು ಮಾಹಿತಿ ನೀಡುವುದು)

(ಇ) ಪ್ರಸಕ್ತ ಸಾಲಿಗೆ ಕೊಪ್ಪಳ ಜಿಲ್ಲೆಗೆ ಸಮಾಜ ಕಲ್ಯಾಣ ಇಲಾಖೆಯಿಂದ ಎಷ್ಟು ಸಮುದಾಯ ಭವನಗಳನ್ನು ನಿರ್ಮಾಣ ಮಾಡಲಾಗಿದೆ; ಯಾವ ಯಾವ ತಾಲ್ಲೂಕುಗಳಲ್ಲಿ ಕಾಮಗಾರಿಗಳು ಪೂರ್ಣಗೊಂಡಿವೆ; ಪೂರ್ಣಗೊಳ್ಳದ ಕಾಮಗಾರಿಗಳೆಷ್ಟು; (ಗ್ರಾಮವಾರು ಮಾಹಿತಿ ನೀಡುವುದು)

(ಈ) ಸದರಿ ಕಾಮಗಾರಿಗಳ ಅನುಷ್ಠಾನವನ್ನು ಯಾವ ಏಜೆನ್ಸಿಗಳಿಗೆ ನೀಡಲಾಗಿದೆ ?

**ಎ. ಶ್ರೀಶ್**

ಕಾರ್ಯದರ್ಶಿ

ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಘಟಕ-2, ಬೆಂ-59/ಕಾ.ಸೂ. 3585/700 ಪ್ರತಿಗಳು/16-07-2014